ಸಂಪುಟ : 11 ಸಂಚಿಕೆ: 125 ಪುಟ : 4+2 ಬೆಲೆ: 3.00 ಗುರುವಾರ ಜೂನ್ 18 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ

Volume : 11 Issue : 125 Pages : 4+2 Price : 3.00 Thursday june 18 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25




### ರೋಣ ಕ್ಷೇತ್ರದ ಅಭಿವೃದ್ಧಿಗೆ ಸಚಿವ ಸಂಪುಟದಲ್ಲಿ ಸ್ಥಾನ ನೀಡುವಂತೆ ಮನವಿ

## ಜಿಎಸ್‌ಪಿಗೆ ಸಚಿವ ಸ್ಥಾನ; ಅನ್ನದಾನ ಶ್ರೀಗಳ ಆಗ್ರಹ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ



ರೋಣ ಕ್ಷೇತ್ರದ ಶಾಸಕ ಹಾಗೂ ನಾಲ್ಕು ಬಾರಿ ವಿಧಾನಸಭೆಗೆ ಆಯ್ಕೆಯಾಗಿರುವ ಹಿರಿಯ ರಾಜಕಾರಣಿ ಜಿ.ಎಸ್. ಪಾಟೀಲ ಅವರಿಗೆ ರಾಜ್ಯ ಸಚಿವ ಸಂಪುಟದಲ್ಲಿ ಸ್ಥಾನ ನೀಡಬೇಕು ಎಂದು ಹಾಲಕೆರೆ ಶ್ರೀ ಅನ್ನದಾನೇಶ್ವರ ಮಠದ ಶ್ರೀ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳು ಮುಖ್ಯಮಂತ್ರಿ ಅವರಿಗೆ ಆಗ್ರಹಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಜಿ.ಎಸ್. ಪಾಟೀಲ ಅವರು ಜನಪರ ಕಾಳಜಿ ಹೊಂದಿರುವ ಸಮರ್ಥ ನಾಯಕರಾಗಿದ್ದು, ಕ್ಷೇತ್ರದ ಜನರ ವಿಶ್ವಾಸವನ್ನು ಗಳಿಸಿದ್ದಾರೆ ಎಂದು ತಿಳಿಸಿದ್ದಾರೆ.

ಗದಗ ಜಿಲ್ಲೆಯಲ್ಲಿಯೇ ಅತಿ ದೊಡ್ಡ ಹಾಗೂ ವಿಸ್ತಾರವಾದ ರೋಣ ಮತಕ್ಷೇತ್ರದ ಅಭಿವೃದ್ಧಿಗೆ ಅವರು ನಿರಂತರವಾಗಿ ಶ್ರಮಿಸುತ್ತಿದ್ದಾರೆ. ಆದರೂ ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಇನ್ನಷ್ಟು ವಿಶೇಷ ಆದ್ಯತೆ ಮತ್ತು ಸರ್ಕಾರದ ಬೆಂಬಲ ಅಗತ್ಯವಿದೆ ಎಂದು ಹೇಳಿದ್ದಾರೆ.

ಕ್ಷೇತ್ರದ ಸಮಸ್ಯೆಗಳು, ಜನರ ಅಗತ್ಯತೆಗಳು ಹಾಗೂ ಅಭಿವೃದ್ಧಿಯ ಆದ್ಯತೆಗಳ ಬಗ್ಗೆ ಸಂಪೂರ್ಣ ಅರಿವು ಹೊಂದಿರುವ ಜಿ.ಎಸ್. ಪಾಟೀಲ ಅವರಿಗೆ ಸಚಿವ ಸ್ಥಾನ ನೀಡಿದರೆ ಸರ್ಕಾರ ಮತ್ತು ಕ್ಷೇತ್ರದ ನಡುವೆ ಮತ್ತಷ್ಟು ಸಮನ್ವಯ ಸಾಧಿಸಲು ಸಾಧ್ಯವಾಗುತ್ತದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

ಪಾಟೀಲರಿಗೆ ಸಚಿವ ಸ್ಥಾನ ದೊರೆತರೆ ರೋಣ ಮತಕ್ಷೇತ್ರದ ಅಭಿವೃದ್ಧಿ ಕಾರ್ಯಗಳಿಗೆ ಹೊಸ ಚೈತನ್ಯ ದೊರೆಯಲಿದ್ದು, ಜನರ ಬಹುಕಾಲದ ಆಶಯವೂ ಈಡೇರುತ್ತದೆ ಎಂದು ಶ್ರೀಗಳು ತಿಳಿಸಿದ್ದಾರೆ.

## ಬೆಟಗೇರಿ: ಇಂದು ವಿದ್ಯುತ್ ವ್ಯತ್ಯಯ

■ವಿಜಯಸಾಕ್ಷಿ ಸುದ್ದಿ, ಗದಗ

110 ಕೆವ್ಹಿ ಬೆಟಗೇರಿ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತ್ರೈಮಾಸಿಕ ನಿರ್ವಹಣಾ ಕಾಮಗಾರಿ ಕೈಗೊಳ್ಳಲಾಗುತ್ತಿರುವ ಹಿನ್ನೆಲೆಯಲ್ಲಿ ಜೂನ್ 18ರಂದು ಹಲವು ಪ್ರದೇಶಗಳಲ್ಲಿ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಲಿದೆ.

ಜೂನ್ 18ರಂದು ಬೆಳಿಗ್ಗೆ 10 ಗಂಟೆಯಿಂದ ಸಂಜೆ 5.30 ಗಂಟೆಯವರೆಗೆ ನಿರ್ವಹಣಾ ಕಾರ್ಯ ನಡೆಯಲಿದ್ದು, ಈ ಅವಧಿಯಲ್ಲಿ ಬೆಟಗೇರಿ 110 ಕೆವ್ಹಿ ವಿದ್ಯುತ್ ವಿತರಣಾ ಕೇಂದ್ರದಿಂದ ವಿದ್ಯುತ್ ಪಡೆಯುವ ಎಲ್ಲಾ ನಗರ ಹಾಗೂ ಗ್ರಾಮೀಣ ಪ್ರದೇಶಗಳ 11 ಕೆವ್ಹಿ ವಿತರಣಾ ಮಾರ್ಗಗಳಲ್ಲಿ ವಿದ್ಯುತ್ ಸರಬರಾಜು ಸ್ಥಗಿತಗೊಳ್ಳಲಿದೆ.

ಅಲ್ಲದೆ, ಎನ್‌ಜೆವೈ, ಸೋಲಾರ್, ಕೆಐಎಡಿಬಿ ಕೈಗಾರಿಕಾ ಪ್ರದೇಶ ಹಾಗೂ ಇಐಪಿ ಫೀಡರ್‌ಗಳಿಗೆ ಸಂಬಂಧಿಸಿದ ಗ್ರಾಹಕರಿಗೂ ವಿದ್ಯುತ್ ವ್ಯತ್ಯಯ ಉಂಟಾಗಲಿದೆ ಎಂದು ಹೆಸ್ಕಾಂ ಪ್ರಕಟಣೆಯಲ್ಲಿ ತಿಳಿಸಿದೆ.

ವಿದ್ಯುತ್ ಗ್ರಾಹಕರು ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಂಡು ಸಹಕರಿಸುವಂತೆ ಮನವಿ ಮಾಡಲಾಗಿದೆ.

### ರೋಣ ಕ್ಷೇತ್ರಕ್ಕೆ ಸಾಮಾಜಿಕ ನ್ಯಾಯ ಒದಗಿಸಿ: ಕಾಂಗ್ರೆಸ್ ಹೈಕಮಾಂಡ್‌ಗೆ ಶ್ರೀಗಳ ಖಡಕ್ ಸಂದೇಶ

# ಜಿ.ಎಸ್.ಪಿಗೆ ಸಚಿವ ಸ್ಥಾನಕ್ಕಾಗಿ ಮಠಾಧೀಶರ ಒತ್ತಡ

■ವಿಜಯಸಾಕ್ಷಿ ಸುದ್ದಿ, ರೋಣ

ರೋಣ ಕ್ಷೇತ್ರದ ಶಾಸಕ ಹಾಗೂ ಗದಗ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಜಿ.ಎಸ್. ಪಾಟೀಲರಿಗೆ ರಾಜ್ಯ ಸಚಿವ ಸಂಪುಟದಲ್ಲಿ ಸ್ಥಾನ ನೀಡಬೇಕು. ಅವರಿಗೆ ಸಚಿವ ಸ್ಥಾನ ನೀಡುವ ವಿಚಾರದಲ್ಲಿ ಮತ್ತಷ್ಟು ವಿಳಂಬ ಮಾಡಿದರೆ ಸರ್ಕಾರವೇ ರಾಜಕೀಯ ಸಂಕಷ್ಟ ಎದುರಿಸಬೇಕಾಗಬಹುದು ಎಂದು ಕುದರಿಮೋತಿ ಶ್ರೀಮಠದ ವಿಜಯಮಹಾಂತ ಸ್ವಾಮೀಜಿ ಪರೋಕ್ಷವಾಗಿ ಎಚ್ಚರಿಕೆ ನೀಡಿದರು.

ಪಟ್ಟಣದ ಯಾತ್ರಾನಿವಾಸದಲ್ಲಿ ತಾಲೂಕು ಜಂಗಮ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ನಡೆದ ಧರ್ಮಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಿ.ಎಸ್. ಪಾಟೀಲರು ನಾಲ್ಕು ಬಾರಿ ಶಾಸಕರಾಗಿ ಕ್ಷೇತ್ರ ಮತ್ತು ಪಕ್ಷಕ್ಕೆ ಪ್ರಾಮಾಣಿಕ ಸೇವೆ ಸಲ್ಲಿಸಿದ್ದಾರೆ. ಇಂತಹ ಅನುಭವಿ ಹಾಗೂ ಜನಪರ ನಾಯಕರಿಗೆ ಸಚಿವ ಸ್ಥಾನ ನೀಡುವುದು ಕಾಂಗ್ರೆಸ್ ಹೈಕಮಾಂಡ್‌ನ ಜವಾಬ್ದಾರಿಯಾಗಿದೆ ಎಂದು ಹೇಳಿದರು.



ರೋಣ ಮತಕ್ಷೇತ್ರಕ್ಕೆ ಸಚಿವ ಸ್ಥಾನ ದೊರೆಯಬೇಕು ಎಂಬುದು ಈ ಭಾಗದ ಜನರ ಬಹುಕಾಲದ ಬೇಡಿಕೆಯಾಗಿದೆ. ಅಭಿವೃದ್ಧಿಯ ದೃಷ್ಟಿಯಿಂದಲೂ ಕ್ಷೇತ್ರಕ್ಕೆ ಸಚಿವ ಸ್ಥಾನ ಅಗತ್ಯವಾಗಿದೆ. ಈ ಭಾಗದ ಜನರ ಆಶಯವನ್ನು ಕಾಂಗ್ರೆಸ್ ವರಿಷ್ಠರು ಗಂಭೀರವಾಗಿ ಪರಿಗಣಿಸಬೇಕು ಎಂದು ಶ್ರೀಗಳು ಆಗ್ರಹಿಸಿದರು.

ಜಿ.ಎಸ್. ಪಾಟೀಲರು ಎಲ್ಲ ಜಾತಿ, ಧರ್ಮ ಮತ್ತು ಸಮುದಾಯಗಳನ್ನು ಸಮಾನವಾಗಿ ಕಾಣುವ ನಾಯಕರು. ಪಕ್ಷದ ಸಂಘಟನೆಗೆ ಮತ್ತು ಕ್ಷೇತ್ರದ ಅಭಿವೃದ್ಧಿಗೆ ಅವರು ನೀಡಿರುವ ಕೊಡುಗೆ ಅಪಾರವಾಗಿದೆ. ಹೀಗಿರುವಾಗ ಸಚಿವ ಸ್ಥಾನ ನೀಡುವಲ್ಲಿ ವಿಳಂಬ ಧೋರಣೆ ಅನುಸರಿಸುವುದು ಸರಿಯಲ್ಲ ಎಂದು ಅಭಿಪ್ರಾಯಪಟ್ಟರು. ಡಾ. ಹೆಚ್.ಕೆ. ಪಾಟೀಲರು ಹಲವು ಬಾರಿ ಸಚಿವರಾಗಿ ಹಾಗೂ ಉನ್ನತ ಹುದ್ದೆಗಳಲ್ಲಿ ಕಾರ್ಯನಿರ್ವಹಿಸಿದ್ದಾರೆ. ಈ ಬಾರಿ ರೋಣ ಕ್ಷೇತ್ರಕ್ಕೆ ಅವಕಾಶ ಕಲ್ಪಿಸುವ ನಿಟ್ಟಿನಲ್ಲಿ ಅವರು ದೊಡ್ಡಮನಸ್ಸು ತೋರಬೇಕು. ಇದರಿಂದ ಅವರ ಗೌರವ ಮತ್ತಷ್ಟು ಹೆಚ್ಚಾಗುತ್ತದೆ ಎಂದು ವಿಜಯಮಹಾಂತ ಶ್ರೀಗಳು ಹೇಳಿದರು.

> "ಜಿ.ಎಸ್. ಪಾಟೀಲರಿಗೆ ಸಚಿವ ಸ್ಥಾನ ನೀಡುವುದು ರೋಣ ಕ್ಷೇತ್ರಕ್ಕೆ ಸಾಮಾಜಿಕ ನ್ಯಾಯ ಒದಗಿಸಿದಂತಾಗುತ್ತದೆ. ಈ ವಿಚಾರದಲ್ಲಿ ವಿಳಂಬವಾದರೆ ಸರ್ಕಾರ ರಾಜಕೀಯವಾಗಿ ಬೆಲೆ ತೆರಬೇಕಾಗಬಹುದು."
> – **ವಿಜಯಮಹಾಂತ ಸ್ವಾಮೀಜಿ, ಕುದರಿಮೋತಿ ಶ್ರೀಮಠ**

*ಮಠಾಧೀಶರ ಧ್ವನಿ ಒಂದೇ*

ನರೇಗಲ್ಲ ಹಿರೇಮಠದ ಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮೀಜಿ ಮಾತನಾಡಿ, ಜಿ.ಎಸ್. ಪಾಟೀಲರು ಸರ್ವಧರ್ಮ ಸಮಭಾವದ ನಾಯಕರು. ಇಂತಹ ನಾಯಕತ್ವಕ್ಕೆ ಸಚಿವ ಸ್ಥಾನ ನೀಡಿದರೆ ಪಕ್ಷಕ್ಕೂ ಬಲ ಬರುತ್ತದೆ ಎಂದರು.

ಅಭಿನವ ಕೊಟ್ಟೂರೇಶ್ವರ ಸ್ವಾಮೀಜಿ ಮಾತನಾಡಿ, "ಜಿ.ಎಸ್. ಪಾಟೀಲರು ಕೇವಲ ವ್ಯಕ್ತಿಯಲ್ಲ, ಒಂದು ಶಕ್ತಿ. ಅವರ ಸಾಮರ್ಥ್ಯವನ್ನು ಸರ್ಕಾರ ಮತ್ತು ಕಾಂಗ್ರೆಸ್ ಪಕ್ಷ ಬಳಸಿಕೊಳ್ಳಬೇಕು" ಎಂದು ಹೇಳಿದರು.

▸▸ 3ನೇ ಪುಟಕ್ಕೆ

### ನೋಂದಣಿ ಕಾರ್ಯದಲ್ಲಿ ನಿರ್ಲಕ್ಷ್ಯ ಕಂಡುಬಂದರೆ ಅಧಿಕಾರಿಗಳ ವಿರುದ್ಧ ಕ್ರಮ: ಡಿಸಿ

# ಜನನ-ಮರಣ ನೋಂದಣಿಯಲ್ಲಿ ವಿಳಂಬ ಸಹಿಸುವುದಿಲ್ಲ

■ವಿಜಯಸಾಕ್ಷಿ ಸುದ್ದಿ, ಗದಗ

ಜನನ ಮತ್ತು ಮರಣ ನೋಂದಣಿ ಪ್ರಕ್ರಿಯೆಯನ್ನು ನಿಗದಿತ ಅವಧಿಯೊಳಗೆ, ದೋಷರಹಿತವಾಗಿ ಪೂರ್ಣಗೊಳಿಸಬೇಕು. ಯಾವುದೇ ಕಾರಣಕ್ಕೂ ವಿಳಂಬ ನೋಂದಣಿಗೆ ಅವಕಾಶ ನೀಡಬಾರದು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಜಿಲ್ಲಾಡಳಿತ ಭವನದಲ್ಲಿ ಬುಧವಾರ ನಡೆದ ಜನನ-ಮರಣ ನೋಂದಣಿ ಪದ್ಧತಿಯ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ನೋಂದಣಿ ಕಾರ್ಯದಲ್ಲಿ ನಿರ್ಲಕ್ಷ್ಯ ಸಹಿಸಲಾಗದು. ನಿರೀಕ್ಷಿತ ಪ್ರಗತಿ ಕಾಣದಿದ್ದರೆ ಸಂಬಂಧಿಸಿದ ಅಧಿಕಾರಿಗಳೇ ಹೊಣೆಗಾರರಾಗಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಜಿಲ್ಲೆಯ ಎಲ್ಲ ಸರ್ಕಾರಿ ಆಸ್ಪತ್ರೆಗಳ ಜನನ-ಮರಣ ನೋಂದಣಿ ವೈದ್ಯಾಧಿಕಾರಿಗಳು ಕಡ್ಡಾಯವಾಗಿ ಡಿಜಿಟಲ್ ಕೀ (ಅುರುಣಚಿಟ ಏಜಥಿ) ಹೊಂದಿರಬೇಕು. ಈ ವಿಷಯದಲ್ಲಿ ಯಾವುದೇ ವಿನಾಯಿತಿ ಅಥವಾ ಕಾರಣಗಳನ್ನು ಒಪ್ಪಲಾಗುವುದಿಲ್ಲ ಎಂದು ಸ್ಪಷ್ಟಪಡಿಸಿದರು.

ಜನನ ಮತ್ತು ಮರಣ ನೋಂದಣಿಯು ಕೇವಲ ಆಡಳಿತಾತ್ಮಕ ಪ್ರಕ್ರಿಯೆಯಲ್ಲ, ನಾಗರಿಕರಿಗೆ ಅಗತ್ಯವಾಗುವ ವಿವಿಧ ದಾಖಲೆಗಳು, ಸರ್ಕಾರಿ ಸೌಲಭ್ಯಗಳು, ಕಾನೂನು ಪ್ರಕ್ರಿಯೆಗಳು ಹಾಗೂ ಗುರುತಿನ ದಾಖಲೆಗಳ ಮೂಲ ಆಧಾರವಾಗಿದೆ. ಆದ್ದರಿಂದ ನೋಂದಣಿ ಕಾರ್ಯದಲ್ಲಿ ಯಾವುದೇ ರೀತಿಯ ನಿರ್ಲಕ್ಷ್ಯ ಅಥವಾ ವಿಳಂಬ ನಡೆಯಬಾರದು ಎಂದು ಜಿಲ್ಲಾಧಿಕಾರಿಗಳು ಸೂಚಿಸಿದರು.



**ಜನನ ನೋಂದಣಿಯಲ್ಲಿ ಗದಗ, ಮುಂಡರಗಿ ಮುಂಚೂಣಿ**

ಜನವರಿಯಿಂದ ಮೇ 2026ರ ಅಂತ್ಯದವರೆಗೆ ಜಿಲ್ಲೆಯಲ್ಲಿ ಒಟ್ಟು 6,994 ಜನನ ಪ್ರಕರಣಗಳು ದಾಖಲಾಗಿದ್ದು, ಅವುಗಳಲ್ಲಿ 5,090 ಪ್ರಕರಣಗಳು (72.78%) ನಿಗದಿತ ಅವಧಿಯೊಳಗೆ ನೋಂದಣಿಯಾಗಿವೆ.

ತಾಲೂಕುವಾರು ಪರಿಶೀಲನೆಯಲ್ಲಿ ಮುಂಡರಗಿ ತಾಲೂಕು 76.56 ಶೇಕಡಾ ಹಾಗೂ ಗದಗ ತಾಲೂಕು 76.43 ಶೇಕಡಾ ಸಾಧನೆಯೊಂದಿಗೆ ಮುಂಚೂಣಿಯಲ್ಲಿವೆ. ಲಕ್ಷ್ಮೇಶ್ವರ 75.79 ಶೇಕಡಾ, ಶಿರಹಟ್ಟಿ 73.68 ಶೇಕಡಾ ಹಾಗೂ ನರಗುಂದ 73.56 ಶೇಕಡಾ ಪ್ರಗತಿ ಸಾಧಿಸಿವೆ. ರೋಣ ತಾಲೂಕು 47.11 ಶೇಕಡಾ ಸಾಧನೆಯೊಂದಿಗೆ ಹಿಂದುಳಿದಿದೆ.

**ಮರಣ ನೋಂದಣಿಯಲ್ಲಿ ಶಿರಹಟ್ಟಿ ಮೊದಲ ಸ್ಥಾನ**

ಜಿಲ್ಲೆಯಲ್ಲಿ ಇದೇ ಅವಧಿಯಲ್ಲಿ ಒಟ್ಟು 3,872 ಮರಣ ಪ್ರಕರಣಗಳು ದಾಖಲಾಗಿದ್ದು, ಅವುಗಳಲ್ಲಿ 2,830 ಪ್ರಕರಣಗಳು (73.09%) ಸಮಯೋಚಿತವಾಗಿ ನೋಂದಣಿಯಾಗಿವೆ.

ಮರಣ ನೋಂದಣಿ ಪ್ರಗತಿಯಲ್ಲಿ ಶಿರಹಟ್ಟಿ ತಾಲೂಕು 79.51 ಶೇಕಡಾ ಸಾಧನೆಯೊಂದಿಗೆ ಮೊದಲ ಸ್ಥಾನದಲ್ಲಿದ್ದು, ಮುಂಡರಗಿ 73.77 ಶೇಕಡಾ, ನರಗುಂದ 73.63 ಶೇಕಡಾ, ಗದಗ 71.68 ಶೇಕಡಾ, ರೋಣ 69.91 ಶೇಕಡಾ ಹಾಗೂ ಲಕ್ಷ್ಮೇಶ್ವರ 68.47 ಶೇಕಡಾ ಸಾಧನೆ ದಾಖಲಿಸಿವೆ.

ಸಭೆಯಲ್ಲಿ ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿ ಬಿ.ಎಸ್. ಪಾಟೀಲ ಮಾಹಿತಿ ನೀಡಿ, ಜಿಲ್ಲೆಯ ಎರಡು ಆಸ್ಪತ್ರೆಗಳು ಜನನ-ಮರಣ ನೋಂದಣಿ ಕಾರ್ಯದಲ್ಲಿ ಉತ್ತಮ ಸಾಧನೆ ಮಾಡಿದ್ದು, ಇತರೆ ಆಸ್ಪತ್ರೆಗಳೂ ಇದೇ ಮಾದರಿಯನ್ನು ಅನುಸರಿಸಬೇಕು ಎಂದು ತಿಳಿಸಿದರು.

> "ಜನನ ಮತ್ತು ಮರಣ ನೋಂದಣಿ ಪ್ರಕ್ರಿಯೆಯನ್ನು ಸಮಯೋಚಿತವಾಗಿ ಹಾಗೂ ದೋಷರಹಿತವಾಗಿ ನಡೆಸುವುದು ಅತ್ಯಂತ ಮಹತ್ವದ್ದಾಗಿದೆ. ಯಾವುದೇ ಕಾರಣಕ್ಕೂ ವಿಳಂಬ ನೋಂದಣಿಗೆ ಅವಕಾಶ ನೀಡಬಾರದು. ನೋಂದಣಿ ಕಾರ್ಯದಲ್ಲಿ ನಿರೀಕ್ಷಿತ ಪ್ರಗತಿ ಕಾಣದಿದ್ದರೆ ಸಂಬಂಧಿಸಿದ ಅಧಿಕಾರಿಗಳೇ ಹೊಣೆಗಾರರಾಗುತ್ತಾರೆ."
> – **ಸಿ.ಎನ್. ಶ್ರೀಧರ್**, ಜಿಲ್ಲಾಧಿಕಾರಿ, ಗದಗ

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್., ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಎ.ಎ. ಕಂಬಾಳಿಮಠ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸನಗೌಡ ಕೊಟೂರ, ಭೂದಾಖಲೆಗಳ ಉಪನಿರ್ದೇಶಕ ರುದ್ರಣ್ಣಗೌಡ ಜಿ.ಜೆ., ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ರಾಧಾ ಮಣ್ಣೂರ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

### ಪಕ್ಷನಿಷ್ಠೆಗೆ ಕಾಂಗ್ರೆಸ್ ಗೌರವ ನೀಡುವ ಸಮಯ ಬಂದಿದೆ: ಅಭಿನವ ಚನ್ನಬಸವ ಸ್ವಾಮೀಜಿ

## ಜಿಎಸ್‌ಪಿಗೆ ಸಚಿವ ಸ್ಥಾನ ಕೊಡಿ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ರೋಣ ಮತಕ್ಷೇತ್ರದ ಹಿರಿಯ ಶಾಸಕ ಜಿ.ಎಸ್. ಪಾಟೀಲ ಅವರಿಗೆ ಸಚಿವ ಸ್ಥಾನ ನೀಡುವ ಮೂಲಕ ಅವರ ಪಕ್ಷನಿಷ್ಠೆ ಹಾಗೂ ಸೇವಾ ಹಿರಿತನಕ್ಕೆ ಗೌರವ ಸಲ್ಲಿಸಬೇಕು ಎಂದು ನಿಡಗುಂದಿಕೊಪ್ಪ ಶಾಖಾ ಶಿವಯೋಗ ಮಂದಿರದ ಅಭಿನವ ಚನ್ನಬಸವ ಸ್ವಾಮೀಜಿ ಆಗ್ರಹಿಸಿದ್ದಾರೆ.



ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಜಿ.ಎಸ್. ಪಾಟೀಲ ಅವರು ಹಲವು ದಶಕಗಳಿಂದ ಕಾಂಗ್ರೆಸ್ ಪಕ್ಷದ ಸಂಘಟನೆ ಹಾಗೂ ಬಲವರ್ಧನೆಗಾಗಿ ನಿರಂತರವಾಗಿ ಶ್ರಮಿಸಿದ್ದಾರೆ ಎಂದು ತಿಳಿಸಿದ್ದಾರೆ.

ಅಧಿಕಾರಕ್ಕಿಂತ ಪಕ್ಷವೇ ಮುಖ್ಯ ಎಂಬ ಸಿದ್ಧಾಂತದೊಂದಿಗೆ ರಾಜಕೀಯ ಜೀವನ ಸಾಗಿಸಿರುವ ಜಿಎಸ್‌ಪಿ ಅವರು ಪಕ್ಷದ ಏಳು-ಬೀಳುಗಳಲ್ಲಿ ಸಮಾನವಾಗಿ ಭಾಗಿಯಾಗಿದ್ದು, ಪಕ್ಷದ ನಿಷ್ಠಾವಂತ ನಾಯಕರಾಗಿ ಗುರುತಿಸಿಕೊಂಡಿದ್ದಾರೆ ಎಂದು ಸ್ವಾಮೀಜಿ ಹೇಳಿದ್ದಾರೆ.

ರೋಣ ಮತಕ್ಷೇತ್ರದ ಅಭಿವೃದ್ಧಿಗೆ ಜಿ.ಎಸ್. ಪಾಟೀಲ ಅವರು ಮಹತ್ವದ ಕೊಡುಗೆ ನೀಡಿದ್ದು, ಜನರೊಂದಿಗೆ ನಿರಂತರ ಸಂಪರ್ಕ ಕಾಯ್ದುಕೊಂಡು ಅಭಿವೃದ್ಧಿ ಕಾರ್ಯಗಳಿಗೆ ಆದ್ಯತೆ ನೀಡಿದ್ದಾರೆ. ಅವರ ಅನುಭವ, ಜನಪರ ಕಾಳಜಿ ಹಾಗೂ ಪಕ್ಷದ ಮೇಲಿನ ಬದ್ಧತೆಯನ್ನು ಪರಿಗಣಿಸಿ ಸಚಿವ ಸಂಪುಟದಲ್ಲಿ ಸ್ಥಾನ ನೀಡುವುದು ಸೂಕ್ತವಾಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

ರಾಜ್ಯ ಸರ್ಕಾರ ಹಾಗೂ ಕಾಂಗ್ರೆಸ್ ಹೈಕಮಾಂಡ್ ಜಿಎಸ್‌ಪಿ ಅವರ ಸೇವೆಯನ್ನು ಗುರುತಿಸಿ ಸಚಿವ ಸ್ಥಾನ ನೀಡುವ ಮೂಲಕ ಉತ್ತರ ಕರ್ನಾಟಕ ಭಾಗದ ಜನರ ನಿರೀಕ್ಷೆ ಈಡೇರಿಸಬೇಕು ಎಂದು ಅಭಿನವ ಚನ್ನಬಸವ ಸ್ವಾಮೀಜಿ ಒತ್ತಾಯಿಸಿದ್ದಾರೆ.

### ರೈತರ ಪರ ನಿಖಿಲ್ ಕುಮಾರಸ್ವಾಮಿ ನೇತೃತ್ವದಲ್ಲಿ ಬೃಹತ್ ಪಾದಯಾತ್ರೆ

## ಬಿಡದಿ ಟೌನ್‌ಶಿಪ್ ವಿರುದ್ಧ ಜೂ.21ಕ್ಕೆ ಶಕ್ತಿ ಪ್ರದರ್ಶನ

■ವಿಜಯಸಾಕ್ಷಿ ಸುದ್ದಿ, ಗದಗ

ಬಿಡದಿ ಟೌನ್‌ಶಿಪ್ ಯೋಜನೆ ವಿರೋಧಿಸಿ ಜೂನ್ 21ರಂದು ಅಂಚಿಪುರ ಗ್ರಾಮದಿಂದ ಹೊಸೂರು ಗ್ರಾಮದವರೆಗೆ ಜೆಡಿಎಸ್ ಯುವ ನಾಯಕ ನಿಖಿಲ್ ಕುಮಾರಸ್ವಾಮಿ ನೇತೃತ್ವದಲ್ಲಿ ನಡೆಯಲಿರುವ ರೈತ ಹೋರಾಟದಲ್ಲಿ ಜಿಲ್ಲೆಯ ರೈತ ಮುಖಂಡರು ಹಾಗೂ ಹೋರಾಟಗಾರರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕು ಎಂದು ಜೆಡಿಎಸ್ ಮುಖಂಡ ವೆಂಕನಗೌಡ ಗೋವಿಂದಗೌಡ್ರು ಕರೆ ನೀಡಿದರು.

ನಗರದ ಪತ್ರಿಕಾ ಭವನದಲ್ಲಿ ಬುಧವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಾಜಿ ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ ಅವರ ಅವಧಿಯಲ್ಲಿ ಬಿಡದಿ ಟೌನ್‌ಶಿಪ್ ಯೋಜನೆ ಸಾರ್ವಜನಿಕ-ಖಾಸಗಿ ಸಹಭಾಗಿತ್ವ (ಪಿಪಿಪಿ) ಮಾದರಿಯಲ್ಲಿ ರೂಪುಗೊಂಡಿತ್ತು. ಆದರೆ ಈಗಿನ ಸರ್ಕಾರ ಅದನ್ನು ಸಂಪೂರ್ಣವಾಗಿ ರಿಯಲ್ ಎಸ್ಟೇಟ್ ಯೋಜನೆಯಾಗಿ ಪರಿವರ್ತಿಸಲು ಮುಂದಾಗಿದೆ ಎಂದು ಆರೋಪಿಸಿದರು.



**ಕುಮಾರಸ್ವಾಮಿ ವಿರುದ್ಧದ ಹೇಳಿಕೆಗಳು ಖಂಡನೀಯ**

ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರು ಯಾವುದೇ ವ್ಯಕ್ತಿಯ ಕುರಿತು ಅವಹೇಳನಕಾರಿ ಹೇಳಿಕೆ ನೀಡಿಲ್ಲ. ಆದರೆ ಕೆಲವು ಸ್ಥಳೀಯ ನಾಯಕರು ಅವರ ಹೆಸರನ್ನು ಬಳಸಿಕೊಂಡು ಅನಗತ್ಯ ವಿವಾದ ಸೃಷ್ಟಿಸುತ್ತಿದ್ದು, ಇಂತಹ ಹೇಳಿಕೆಗಳು ಖಂಡನೀಯ ಎಂದು ವೆಂಕನಗೌಡ ಗೋವಿಂದಗೌಡ್ರು ಹೇಳಿದರು.

ಈಗಿನ ಯೋಜನೆಗೂ ಕುಮಾರಸ್ವಾಮಿ ಅವರ ಯೋಜನೆಗೂ ಯಾವುದೇ ಸಂಬಂಧವಿಲ್ಲ. ಆದರೂ ಯೋಜನೆಯನ್ನು ಕುಮಾರಸ್ವಾಮಿ ಅವರೊಂದಿಗೆ ತಳುಕು ಹಾಕಿ ಮಾತನಾಡುವುದು ಸರಿಯಲ್ಲ ಎಂದು ಹೇಳಿದರು.

ಬಿಡದಿ ಟೌನ್‌ಶಿಪ್ ವ್ಯಾಪ್ತಿಗೆ ಒಳಪಡುವ 514 ರೈತರ ಪೈಕಿ 480 ರೈತರು ಭೂಮಿ ನೀಡುವುದಿಲ್ಲ ಎಂದು ಸ್ಪಷ್ಟಪಡಿಸಿದ್ದರೂ, ಸರ್ಕಾರ ರೈತರ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲು ಮುಂದಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

> "ಬಿಡದಿ ಟೌನ್‌ಶಿಪ್ ಯೋಜನೆಯಿಂದ ರೈತರ ಭೂಮಿಗೆ ಅನ್ಯಾಯವಾಗಬಾರದು. ರೈತರ ಹಕ್ಕುಗಳ ರಕ್ಷಣೆಗೆ ಜೂನ್ 21ರ ಹೋರಾಟದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು."
> –**ವೆಂಕನಗೌಡ ಗೋವಿಂದಗೌಡ್ರು**, ಜೆಡಿಎಸ್ ಮುಖಂಡ

ರಾಜ್ಯದಲ್ಲಿ ಅಭಿವೃದ್ಧಿಗೆ ಸಂಬಂಧಿಸಿದ ಅನೇಕ ಸಮಸ್ಯೆಗಳು ಬಾಕಿ ಇರುವಾಗ ರೈತರ ಭೂಮಿ ಕಸಿದುಕೊಳ್ಳುವ ಪ್ರಯತ್ನ ನಡೆಯಬಾರದು. ಮುಂಗಾರು ಹಂಗಾಮಿನಲ್ಲಿ ರೈತರಿಗೆ ಅಗತ್ಯ ಬೀಜ ಮತ್ತು ಗೊಬ್ಬರ ಸಮರ್ಪಕವಾಗಿ ಪೂರೈಕೆಯಾಗುವಂತೆ ಸರ್ಕಾರ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಗ್ಯಾರಂಟಿ ಯೋಜನೆಗಳ ಮರುಪರಿಶೀಲನೆ ಕುರಿತ ಚರ್ಚೆಗಳು ನಡೆಯುತ್ತಿರುವ ಹಿನ್ನೆಲೆಯಲ್ಲಿ, ಜನರು ಗ್ಯಾರಂಟಿ ಯೋಜನೆಗಳನ್ನು ನಂಬಿಯೇ ಮತ ನೀಡಿದ್ದಾರೆ. ಹೀಗಾಗಿ ಯಾವುದೇ ಬದಲಾವಣೆ ಮಾಡದೆ ಯೋಜನೆಗಳನ್ನು ಮುಂದುವರಿಸಬೇಕು ಎಂದು ಒತ್ತಾಯಿಸಿದರು.

ಜೂನ್ 21ರಂದು ನಡೆಯಲಿರುವ ರೈತ ಹೋರಾಟದಲ್ಲಿ ಗದಗ ಜಿಲ್ಲೆಯಿಂದ ಸುಮಾರು 200ಕ್ಕೂ ಹೆಚ್ಚು ರೈತರು ಮತ್ತು ಕಾರ್ಯಕರ್ತರು ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಬಸವರಾಜ ಅಪ್ಪಣ್ಣವರ, ಜಿ.ಕೆ. ಕೊಳ್ಳಿಮಠ, ಪ್ರಫುಲ್ ಕುಮಾರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ರಾಷ್ಟ್ರಮಟ್ಟದ ಸುದ್ದಿ ಛಾಯಾಚಿತ್ರ ಸ್ಪರ್ಧೆಗೆ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕರ್ನಾಟಕ ಮಾಧ್ಯಮ ಅಕಾಡೆಮಿಯು ಸುದ್ದಿ ಛಾಯಾಚಿತ್ರಗ್ರಾಹಕರಿಗಾಗಿ "ಫೋಕಸ್ ಆನ್ ನ್ಯೂಸ್" ಹೆಸರಿನ ರಾಷ್ಟ್ರಮಟ್ಟದ ಪತ್ರಿಕಾ ಛಾಯಾಚಿತ್ರ ಸ್ಪರ್ಧೆಯನ್ನು ಆಯೋಜಿಸಿದೆ.

ಸ್ಪರ್ಧೆಯಲ್ಲಿ ಆಯ್ಕೆಯಾಗುವ ಪ್ರಥಮ, ದ್ವಿತೀಯ ಹಾಗೂ ತೃತೀಯ ಸ್ಥಾನಗಳ ಛಾಯಾಚಿತ್ರಗಳಿಗೆ ಕ್ರಮವಾಗಿ ₹35,000, ₹25,000 ಹಾಗೂ ₹15,000 ನಗದು ಬಹುಮಾನ ನೀಡಲಾಗುವುದು. ಜೊತೆಗೆ ಆಯ್ಕೆಯಾಗುವ 50 ಅತ್ಯುತ್ತಮ ಛಾಯಾಚಿತ್ರಗಳ ಪ್ರದರ್ಶನವೂ ಏರ್ಪಡಿಸಲಾಗುವುದು.

2025ರ ಜನವರಿ 1ರಿಂದ 2026ರ ಮೇ 31ರವರೆಗೆ ಚಿತ್ರಿಸಿರುವ ಹಾಗೂ ಪ್ರಕಟವಾಗಿರುವ ಸುದ್ದಿ ಛಾಯಾಚಿತ್ರಗಳನ್ನು ಮಾತ್ರ ಸ್ಪರ್ಧೆಗೆ ಪರಿಗಣಿಸಲಾಗುತ್ತದೆ. ಪ್ರತಿ ಛಾಯಾಚಿತ್ರಗ್ರಾಹಕರು ತಾವು ಚಿತ್ರಿಸಿರುವ ಎರಡು ಸುದ್ದಿ ಛಾಯಾಚಿತ್ರಗಳನ್ನು ಮಾತ್ರ ಸಲ್ಲಿಸಬಹುದಾಗಿದೆ.

ಸ್ಪರ್ಧೆಯಲ್ಲಿ ಭಾಗವಹಿಸುವವರು ತಾವು ಕಾರ್ಯನಿರ್ವಹಿಸುತ್ತಿರುವ ಪತ್ರಿಕೆಯ ಸಂಪಾದಕರಿಂದ ದೃಢೀಕರಣ ಪತ್ರ ಅಥವಾ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ/ಪಿಐಬಿಯಿಂದ ನೀಡಲಾದ ಮಾನ್ಯತಾ ಪತ್ರದ ಪ್ರತಿ ಸಲ್ಲಿಸಬೇಕು.

ಮೊಬೈಲ್ ಕ್ಯಾಮೆರಾದಲ್ಲಿ ತೆಗೆದ ಚಿತ್ರಗಳನ್ನು ಸ್ವೀಕರಿಸುವುದಿಲ್ಲ. ಛಾಯಾಚಿತ್ರಗಳು JPEG ಮಾದರಿಯಲ್ಲಿದ್ದು, ಕನಿಷ್ಠ 5 MB ಗಾತ್ರ ಹಾಗೂ 300 DPI ಗುಣಮಟ್ಟ ಹೊಂದಿರಬೇಕು. AI ತಂತ್ರಜ್ಞಾನ ಬಳಸಿ ಸೃಷ್ಟಿಸಿದ ಚಿತ್ರಗಳನ್ನು ಸ್ಪರ್ಧೆಗೆ ಪರಿಗಣಿಸಲಾಗುವುದಿಲ್ಲ.

ಆಸಕ್ತರು ಅಕಾಡೆಮಿಯ ವೆಬ್‌ಸೈಟ್‌ನಿಂದ ಅರ್ಜಿ ನಮೂನೆ ಡೌನ್‌ಲೋಡ್ ಮಾಡಿಕೊಂಡು ಭರ್ತಿ ಮಾಡಿ, ಪಾಸ್‌ಪೋರ್ಟ್ ಗಾತ್ರದ ಭಾವಚಿತ್ರ ಹಾಗೂ ಛಾಯಾಚಿತ್ರಗಳೊಂದಿಗೆ ಜೂನ್ 30ರ ಸಂಜೆ 5 ಗಂಟೆಯೊಳಗೆ ಇ-ಮೇಲ್ ಮೂಲಕ ಸಲ್ಲಿಸಬೇಕು.



ಲಕ್ಷ್ಮೇಶ್ವರ: ತಾಲೂಕಿನ ಕೊಂಡಿಕೊಪ್ಪ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ವಿದ್ಯಾರ್ಥಿ ದಿಲೀಪ ನಾಗಪ್ಪ ವಾಲ್ಮೀಕಿ ಅವರು ಗೊಜನೂರಿನ ಮೊರಾರ್ಜಿ ದೇಸಾಯಿ ವಸತಿ ಶಾಲೆಗೆ ಆಯ್ಕೆಯಾಗಿದ್ದು, ಗ್ರಾಮ ಹಾಗೂ ಶಾಲೆಗೆ ಕೀರ್ತಿ ತಂದಿದ್ದಾರೆ. ವಿದ್ಯಾರ್ಥಿಯ ಸಾಧನೆಗೆ ಶಿಕ್ಷಕರು, ಪೋಷಕರು ಹಾಗೂ ಗ್ರಾಮಸ್ಥರು ಹರ್ಷ ವ್ಯಕ್ತಪಡಿಸಿದ್ದಾರೆ.

### ಸ್ಲಂ ಜನರ ಭರವಸೆ ಈಡೇರಿಕೆಗೆ ಜೂನ್ 20ರಂದು ರಾಜ್ಯ ಮಟ್ಟದ ಸಮಾವೇಶ

# ಸ್ಲಂ ಜನಾಂದೋಲನದ ರಾಜ್ಯ ಪ್ರತಿನಿಧಿಗಳ ಸಮ್ಮೇಳನ

■ವಿಜಯಸಾಕ್ಷಿ ಸುದ್ದಿ, ಗದಗ

ಚುನಾವಣಾ ಪ್ರಣಾಳಿಕೆಯಲ್ಲಿ ಸ್ಲಂ ನಿವಾಸಿಗಳು ಹಾಗೂ ಬಡಜನರಿಗೆ ನೀಡಿರುವ ಭರವಸೆಗಳನ್ನು ರಾಜ್ಯ ಸರ್ಕಾರ ಈಡೇರಿಸಬೇಕು ಎಂದು ಒತ್ತಾಯಿಸಿ ಸ್ಲಂ ಜನಾಂದೋಲನ-ಕರ್ನಾಟಕ ವತಿಯಿಂದ ಜೂನ್ 20ರಂದು ಗದಗ ನಗರದಲ್ಲಿ ರಾಜ್ಯ ಪ್ರತಿನಿಧಿಗಳ ಸಮ್ಮೇಳನ ಹಮ್ಮಿಕೊಳ್ಳಲಾಗಿದೆ ಎಂದು ಸಂಘಟನೆಯ ರಾಜ್ಯ ಸಂಚಾಲಕ ಎ. ನರಸಿಂಹಮೂರ್ತಿ ತಿಳಿಸಿದ್ದಾರೆ.

ನಗರದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು ಮೂರು ವರ್ಷಗಳು ಕಳೆದರೂ ಸ್ಲಂ ನಿವಾಸಿಗಳಿಗೆ ನೀಡಿದ್ದ ಹಲವು ಭರವಸೆಗಳು ಇನ್ನೂ ಈಡೇರಿಲ್ಲ ಎಂದು ಆರೋಪಿಸಿದರು.

ಸ್ಲಂ ನಿವಾಸಿಗಳಿಗೆ ಹಕ್ಕುಪತ್ರ ವಿತರಣೆ, ಉಚಿತ ಮನೆಗಳ ನಿರ್ಮಾಣ ಸೇರಿದಂತೆ ವಿವಿಧ ಯೋಜನೆಗಳ ಅನುಷ್ಠಾನದಲ್ಲಿ ಸರ್ಕಾರ ನಿರೀಕ್ಷಿತ ಮಟ್ಟದಲ್ಲಿ ಕಾರ್ಯನಿರ್ವಹಿಸಿಲ್ಲ. ಬಡಜನರ ಕಲ್ಯಾಣ ಮತ್ತು ಸಾಮಾಜಿಕ ನ್ಯಾಯದ




ವಿಚಾರದಲ್ಲಿ ಸರ್ಕಾರ ತನ್ನ ವಾಗ್ದಾನಗಳನ್ನು ಪೂರ್ಣ ಪ್ರಮಾಣದಲ್ಲಿ ಅನುಷ್ಠಾನಗೊಳಿಸಬೇಕು ಎಂದು ಒತ್ತಾಯಿಸಿದರು.

ಗದಗ ಜಿಲ್ಲಾ ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ್ ಆರ್. ಮಾನ್ವಿ ಮಾತನಾಡಿ, ಪಂಚ ಗ್ಯಾರಂಟಿ ಯೋಜನೆಗಳ ಫಲಾನುಭವಿಗಳ ಪರಿಷ್ಕರಣೆ ಹೆಸರಿನಲ್ಲಿ ಅರ್ಹ ಫಲಾನುಭವಿಗಳನ್ನು ಯೋಜನೆಯಿಂದ ಹೊರಗಿಡುವ ಪ್ರಯತ್ನ ನಡೆಯುತ್ತಿದೆ ಎಂಬ ಆತಂಕ ವ್ಯಕ್ತಪಡಿಸಿದರು.

ಜೂನ್ 20ರಂದು ನಗರದ ಲಾಯನ್ಸ್ ಭವನದಲ್ಲಿ ನಡೆಯಲಿರುವ ರಾಜ್ಯ ಪ್ರತಿನಿಧಿಗಳ ಸಮ್ಮೇಳನದಲ್ಲಿ ರಾಜ್ಯದ ವಿವಿಧ ಜಿಲ್ಲೆಗಳ ಪ್ರತಿನಿಧಿಗಳು ಭಾಗವಹಿಸಲಿದ್ದಾರೆ. ಅಂದು ಬೆಳಗ್ಗೆ 9.30ಕ್ಕೆ ನಗರಸಭೆ ಆವರಣದಿಂದ ರ‍್ಯಾಲಿ ಆರಂಭವಾಗಲಿದ್ದು, ಸಾಮಾಜಿಕ ಹೋರಾಟಗಾರ ಹಾಗೂ ಚಲನಚಿತ್ರ ನಟ ಅಹಿಂಸಾ ಚೇತನ ಚಾಲನೆ ನೀಡಲಿದ್ದಾರೆ.

> "ಚುನಾವಣಾ ಪ್ರಣಾಳಿಕೆಯಲ್ಲಿ ಸ್ಲಂ ನಿವಾಸಿಗಳಿಗೆ ನೀಡಿದ ಭರವಸೆಗಳನ್ನು ಸರ್ಕಾರ ಈಡೇರಿಸಬೇಕು. ಬಡಜನರ ಹಕ್ಕುಗಳ ರಕ್ಷಣೆಗಾಗಿ ರಾಜ್ಯ ಮಟ್ಟದಲ್ಲಿ ಹೋರಾಟ ಮುಂದುವರಿಯಲಿದೆ."
> – ಎ. ನರಸಿಂಹಮೂರ್ತಿ, ರಾಜ್ಯ ಸಂಚಾಲಕ, ಸ್ಲಂ ಜನಾಂದೋಲನ-ಕರ್ನಾಟಕ

ಗುರು ಬಸವೇಶ್ವರ ಮಠದ ಡಾ. ಪ್ರಭು ಮಹಾಂತ ಮಹಾಸ್ವಾಮೀಜಿ ಸಮ್ಮೇಳನ ಉದ್ಘಾಟಿಸಲಿದ್ದು, ಸಾವಿತ್ರಿಬಾಯಿ ಫುಲೆ ಮಹಿಳಾ ಸಮಿತಿಯ ರಾಜ್ಯ ಸಂಚಾಲಕಿ ಚಂದ್ರಮ್ಮ ಅಧ್ಯಕ್ಷತೆ ವಹಿಸಲಿದ್ದಾರೆ. ವಿವಿಧ ಸಾಮಾಜಿಕ ಹೋರಾಟಗಾರರು, ಪ್ರಗತಿಪರ ಚಿಂತಕರು ಹಾಗೂ ರಾಜ್ಯದ ಜಿಲ್ಲಾ ಪ್ರತಿನಿಧಿಗಳು ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ವೆಂಕಮ್ಮ, ವೆಂಗಮ್ಮ, ಪರವೀನಬಾನು ಹವಾಲ್ದಾರ, ಇಬ್ರಾಹಿಂ ಮುಲ್ಲಾ, ಮೌಲಾಸಾಬ ಗಚ್ಚಿ, ಶರಣಪ್ಪ ಸೂಡಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ವಿದ್ಯಾರ್ಥಿ ವೇತನಕ್ಕೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ವತಿಯಿಂದ 2026-27ನೇ ಶೈಕ್ಷಣಿಕ ಸಾಲಿನ ಪ್ರೀ-ಮೆಟ್ರಿಕ್ ಹಾಗೂ ಪೋಸ್ಟ್-ಮೆಟ್ರಿಕ್ ವಿದ್ಯಾರ್ಥಿವೇತನ ಯೋಜನೆಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಗದಗ ಜಿಲ್ಲೆಯ ವಿವಿಧ ಶಾಲೆ ಹಾಗೂ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿಕಲಚೇತನ ವಿದ್ಯಾರ್ಥಿಗಳು ಸ್ಟೇಟ್ ಸ್ಕಾಲರ್‌ಶಿಪ್ ಪೋರ್ಟಲ್ (ಎಸ್‌ಎಸ್‌ಪಿ) ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ. ವಿದ್ಯಾರ್ಥಿಗಳು https://ssp.postmatric.karnataka.gov.in ಪೋರ್ಟಲ್‌ನಲ್ಲಿ ಅಗತ್ಯ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಬೇಕು.

ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿದ ಬಳಿಕ ಅರ್ಜಿಯ ಪ್ರತಿಯನ್ನು ತಮ್ಮ ವ್ಯಾಪ್ತಿಯ ಗ್ರಾಮ ಪಂಚಾಯಿತಿಯ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರು (ವಿ.ಆರ್.ಡಬ್ಲ್ಯೂ.), ನಗರಸಭೆ, ಪುರಸಭೆ ಹಾಗೂ ಪಟ್ಟಣ ಪಂಚಾಯಿತಿಯ ನಗರ ಪುನರ್ವಸತಿ ಕಾರ್ಯಕರ್ತರು (ಯು.ಆರ್. ಡಬ್ಲ್ಯೂ.) ಅಥವಾ ತಾಲೂಕು ಪಂಚಾಯಿತಿಯ ಬಹುಉದ್ದೇಶ ಪುನರ್ವಸತಿ ಕಾರ್ಯಕರ್ತರು (ಎಂ.ಆರ್.ಡಬ್ಲ್ಯೂ.) ಅವರಿಗೆ ಸಲ್ಲಿಸಬೇಕು ಎಂದು ಇಲಾಖೆ ತಿಳಿಸಿದೆ.

ಹೆಚ್ಚಿನ ಮಾಹಿತಿಗಾಗಿ ಗದಗ ತಾಲೂಕಿನಲ್ಲಿ ಖಾಜಾಹುಸೇನ ಕಾತರಕಿ (8867556465), ರೋಣ ತಾಲೂಕಿನಲ್ಲಿ ಬಸವರಾಜ ಓಲಿ (9741615926), ಮುಂಡರಗಿ ತಾಲೂಕಿನಲ್ಲಿ ಶಶಿಕಲಾ ವಡ್ಡಟ್ಟಿ (9611922445), ಶಿರಹಟ್ಟಿ ತಾಲೂಕಿನಲ್ಲಿ ಭಾರತಿ ಮುರಶಿಳ್ಳಿ (8951128679), ನರಗುಂದ ತಾಲೂಕಿನಲ್ಲಿ ಶಿವಾನಂದ ಹಾದಿಮನಿ (9591679022) ಅವರನ್ನು ಸಂಪರ್ಕಿಸಬಹುದಾಗಿದೆ.

ಅಲ್ಲದೆ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಜಿಲ್ಲಾಡಳಿತ ಭವನ, ಗದಗ (ದೂರವಾಣಿ: 08372-220419) ಕಚೇರಿಯನ್ನೂ ಸಂಪರ್ಕಿಸಬಹುದು.

### ನಿವೃತ್ತ ಶಿಕ್ಷಕಿ ವರಮಹಾಲಕ್ಷ್ಮೀ ಪೂಜಾರರಿಗೆ ಕೃತಜ್ಞತಾ ಸಮರ್ಪಣೆ, ಸಾಧಕರಿಗೆ ಸನ್ಮಾನ

# ಶಿಕ್ಷಕರು ಭವಿಷ್ಯ ರೂಪಿಸುವ ಶ್ರೇಷ್ಠ ಶಿಲ್ಪಿಗಳು

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಶಿಕ್ಷಕರು ಕೇವಲ ಅಕ್ಷರ ಜ್ಞಾನ ನೀಡುವವರಲ್ಲ, ವಿದ್ಯಾರ್ಥಿಗಳ ಭವಿಷ್ಯ ರೂಪಿಸುವ ಶ್ರೇಷ್ಠ ಶಿಲ್ಪಿಗಳಾಗಿದ್ದಾರೆ ಎಂದು ಶಿರಹಟ್ಟಿ ಫಕ್ಕೀರೇಶ್ವರ ಸಂಸ್ಥಾನಮಠದ ಉತ್ತರಾಧಿಕಾರಿ ಶ್ರೀ ಫಕೀರ ದಿಂಗಾಲೇಶ್ವರ ಮಹಾಸ್ವಾಮಿಗಳು ಹೇಳಿದರು.

ಪಟ್ಟಣದ ಶ್ರೀ ಶಂಕರ ಭಾರತಿ ಕಲ್ಯಾಣ ಮಂಟಪದಲ್ಲಿ ನಿವೃತ್ತ ಮುಖ್ಯೋಪಾಧ್ಯಾಯಿನಿ ವರಮಹಾಲಕ್ಷ್ಮೀ ಪೂಜಾರ ಅವರ ಕುಟುಂಬದ ವತಿಯಿಂದ ಹಮ್ಮಿಕೊಂಡಿದ್ದ ಕೃತಜ್ಞತಾ ಸಮರ್ಪಣೆ ಹಾಗೂ ಸಾಧಕರ ಸನ್ಮಾನ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.

ಭಾರತೀಯ ಸಂಸ್ಕೃತಿಯಲ್ಲಿ ಗುರುವಿಗೆ ದೇವರ ಸ್ಥಾನ ನೀಡಲಾಗಿದ್ದು, ಅಕ್ಷರ ಜ್ಞಾನದ ಜೊತೆಗೆ ಉತ್ತಮ ಸಂಸ್ಕಾರ ಮತ್ತು ನೈತಿಕ ಮೌಲ್ಯಗಳನ್ನು ಕಲಿಸುವುದೇ ನಿಜವಾದ ಶಿಕ್ಷಣ ಎಂದು ಶ್ರೀಗಳು



> "ನಿವೃತ್ತಿ ಎಂದರೆ ಸೇವೆಯ ಅಂತ್ಯವಲ್ಲ. ಸಮಾಜಕ್ಕೆ ಜ್ಞಾನ ಮತ್ತು ಅನುಭವ ಹಂಚಿಕೊಳ್ಳಲು ದೊರೆಯುವ ಮತ್ತೊಂದು ಅವಕಾಶ."
> – ಶ್ರೀ ಫಕೀರ ದಿಂಗಾಲೇಶ್ವರ ಮಹಾಸ್ವಾಮಿಗಳು

ಹೇಳಿದರು. 32 ವರ್ಷಗಳ ಸೇವಾವಧಿಯಲ್ಲಿ ಸಾವಿರಾರು ವಿದ್ಯಾರ್ಥಿಗಳ ಬದುಕಿಗೆ ಬೆಳಕು ನೀಡಿರುವ ವರಮಹಾಲಕ್ಷ್ಮೀ ಪೂಜಾರ ಅವರ ಸೇವೆ ಮಾದರಿಯಾಗಿದೆ ಎಂದು ಶ್ಲಾಘಿಸಿದರು.

ಕಾರ್ಯಕ್ರಮ ಉದ್ಘಾಟಿಸಿದ ಡಿಡಿಪಿಐ ಆರ್.ಎಸ್. ಬುರಡಿ ಮಾತನಾಡಿ, ಶಿಕ್ಷಕ ವೃತ್ತಿ ಸಮಾಜ ನಿರ್ಮಾಣದ ಶ್ರೇಷ್ಠ ಸೇವೆಯಾಗಿದ್ದು, ವಿದ್ಯಾರ್ಥಿಗಳನ್ನು ಸತ್ಪ್ರಜೆಗಳಾಗಿ ರೂಪಿಸುವಲ್ಲಿ ಶಿಕ್ಷಕರ ಪಾತ್ರ ಮಹತ್ವದ್ದಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಹೆಚ್ಚಿನ ಅಂಕ ಪಡೆದ ವಿದ್ಯಾರ್ಥಿಗಳನ್ನು ಹಾಗೂ ವಿವಿಧ ಕ್ಷೇತ್ರಗಳ ಸಾಧಕರನ್ನು ಸನ್ಮಾನಿಸಲಾಯಿತು.


### ಲಿಂಗಾಯತ ಪ್ರಗತಿಶೀಲ ಸಂಘದ 2802ನೇ ಶಿವಾನುಭವ ಕಾರ್ಯಕ್ರಮದಲ್ಲಿ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳ ಅಭಿಮತ

# ಜಾನಪದ ಹಾಡುಗಳು ಜನಸಾಮಾನ್ಯರ ಜೀವನಾಡಿ

■ವಿಜಯಸಾಕ್ಷಿ ಸುದ್ದಿ, ಗದಗ

ಜನಪದ ಸಾಹಿತ್ಯವು ಕನ್ನಡ ಸಂಸ್ಕೃತಿಯ ಜೀವಂತ ಆಕರವಾಗಿದ್ದು, ಜಾನಪದ ಹಾಡುಗಳು ಜನಸಾಮಾನ್ಯರ ಬದುಕಿನ ಭಾವನೆ, ಅನುಭವ ಮತ್ತು ಸಂಸ್ಕೃತಿಯನ್ನು ಪ್ರತಿಬಿಂಬಿಸುವ ಜೀವನಾಡಿಯಾಗಿವೆ ಎಂದು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಹೇಳಿದರು.

ಲಿಂಗಾಯತ ಪ್ರಗತಿಶೀಲ ಸಂಘದ 2802ನೇ ಶಿವಾನುಭವ ಕಾರ್ಯಕ್ರಮದಲ್ಲಿ ಆಶೀರ್ವಚನ ನೀಡಿದ ಅವರು, ಗ್ರಾಮೀಣ ಜನರು ತಮ್ಮ ಕಾಯಕ, ಸುಖ-ದುಃಖ ಹಾಗೂ ಬದುಕಿನ ವಿವಿಧ ಅನುಭವಗಳನ್ನು ಜಾನಪದ ಹಾಡುಗಳ ಮೂಲಕ ಅಭಿವ್ಯಕ್ತಿಪಡಿಸುತ್ತಿದ್ದರು. ಯಾವುದೇ ಪದವಿ ಅಥವಾ ಔಪಚಾರಿಕ ಶಿಕ್ಷಣವಿಲ್ಲದಿದ್ದರೂ ತಮ್ಮ ಆಶು




ಕವಿತ್ವದ ಮೂಲಕ ಅಮೂಲ್ಯ ಸಾಹಿತ್ಯವನ್ನು ಸೃಷ್ಟಿಸಿದ್ದಾರೆ ಎಂದು ಹೇಳಿದರು.

ಜನಪದ ಕೋಗಿಲೆ ಗೌರಮ್ಮ ಚಲವಾದಿ ಅವರ ಕಥೆಗಳು ಅಪಾರ ಮೌಲಿಕತೆಯನ್ನು ಹೊಂದಿದ್ದು, ಅವುಗಳನ್ನು ಇಂಗ್ಲಿಷ್‌ಗೆ ಅನುವಾದಿಸಿದರೆ ವಿಶ್ವಮಟ್ಟದಲ್ಲಿ ಚರ್ಚೆಗೆ ಗ್ರಾಸವಾಗುವಷ್ಟು ಆಳವಾದ ವಿಚಾರಗಳನ್ನು ಒಳಗೊಂಡಿವೆ ಎಂದು ಅಭಿಪ್ರಾಯಪಟ್ಟರು.

> "ಜನಪದ ಸಾಹಿತ್ಯವು ಕೇವಲ ಹಾಡು ಅಥವಾ ಕಥೆಗಳ ಸಂಗ್ರಹವಲ್ಲ; ಅದು ಕನ್ನಡಿಗರ ಬದುಕು, ಸಂಸ್ಕೃತಿ ಮತ್ತು ಜೀವನ ಮೌಲ್ಯಗಳನ್ನು ಪ್ರತಿಬಿಂಬಿಸುವ ಅಮೂಲ್ಯ ಪರಂಪರೆಯಾಗಿದೆ."
> – ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು

'ಜನಪದ ಸಾಹಿತ್ಯದಲ್ಲಿ ಜೀವನ ಮೌಲ್ಯಗಳು' ವಿಷಯದ ಕುರಿತು ಉಪನ್ಯಾಸ ನೀಡಿದ ಕುಷ್ಟಗಿಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಕ್ಷೇತ್ರ ಸಂಪನ್ಮೂಲ ವ್ಯಕ್ತಿ ಜೀವನಸಾಬ್ ಮಾ. ವಾಲಿಕಾರ, ಜನಪದರು ಸಂಸ್ಕೃತಿಯ ರಾಯಭಾರಿಗಳಾಗಿದ್ದು, ಸಮಾಜದಲ್ಲಿ ಸಮಷ್ಟಿ ಹಿತದ ಬದುಕಿಗೆ ಪ್ರೇರಣೆಯಾಗಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಲಿಂಗಾಯತ ಪ್ರಗತಿಶೀಲ ಸಂಘದ ಮಾಜಿ ಅಧ್ಯಕ್ಷ ಈಶ್ವರಪ್ಪ ಮುನವಳ್ಳಿ ದಂಪತಿಗಳನ್ನು ಸನ್ಮಾನಿಸಲಾಯಿತು. ಲಲಿತಕಲಾ ಅಕಾಡೆಮಿ ಪ್ರಶಸ್ತಿ ಪುರಸ್ಕೃತ ತಿರುಪತಿ ಶಿವನಗುತ್ತಿ ಅವರನ್ನು ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ವಚನ ಸಂಗೀತ, ಧರ್ಮಗ್ರಂಥ ಪಠಣ ಹಾಗೂ ವಚನ ಚಿಂತನ ಕಾರ್ಯಕ್ರಮಗಳು ಜರುಗಿದವು. ಸಂಘದ ಪದಾಧಿಕಾರಿಗಳು, ಭಕ್ತರು ಹಾಗೂ ಗಣ್ಯರು ಭಾಗವಹಿಸಿದ್ದರು.

### ಗೊಣಗಿಯಲ್ಲಿ ನೂತನ ಹನುಮಾನ್ ದೇವಸ್ಥಾನ ಉದ್ಘಾಟನೆ, ಕಳಸಾರೋಹಣ ಅಂಗವಾಗಿ ಧರ್ಮ ಜಾಗೃತಿ ಸಮಾರಂಭ

# ಶಾಂತಿ-ನೆಮ್ಮದಿಯ ಬದುಕಿಗೆ ಧರ್ಮವೇ ಆಶಾಕಿರಣ

■ವಿಜಯಸಾಕ್ಷಿ ಸುದ್ದಿ, ಕಮಲಾಪುರ

ಭೌತಿಕ ಸಂಪತ್ತು ಎಷ್ಟೇ ಇದ್ದರೂ ಅದರಿಂದ ಶಾಶ್ವತ ಶಾಂತಿ ಮತ್ತು ನೆಮ್ಮದಿ ದೊರೆಯುವುದಿಲ್ಲ. ಪವಿತ್ರ ಧರ್ಮಾಚರಣೆಯಿಂದ ಮಾತ್ರ ಜೀವನ ಉಜ್ವಲಗೊಳ್ಳಲು ಸಾಧ್ಯ ಎಂದು ಬಾಳೆಹೊನ್ನೂರಿನ ಶ್ರೀ ರಂಭಾಪುರಿ ಪೀಠದ ಡಾ. ವೀರಸೋಮೇಶ್ವರ ಜಗದ್ಗುರುಗಳು ಹೇಳಿದರು.

ತಾಲೂಕಿನ ಗೊಣಗಿ ಗ್ರಾಮದಲ್ಲಿ ನೂತನ ಶ್ರೀ ಹನುಮಾನ್ ದೇವಸ್ಥಾನದ ಉದ್ಘಾಟನೆ ಹಾಗೂ ಕಳಸಾರೋಹಣ ಅಂಗವಾಗಿ ನಡೆದ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದ ಅವರು, ಧರ್ಮದ ಮಹತ್ವ ಮತ್ತು ಮಾನವ ಜೀವನದಲ್ಲಿ ಅದರ ಪಾತ್ರದ ಕುರಿತು ವಿವರಿಸಿದರು.

ಹೊತ್ತ ಭೂಮಿ ಮತ್ತು ಹೆತ್ತ ತಾಯಿ ಎಷ್ಟು ಮುಖ್ಯವೋ ಅಷ್ಟೇ ಧರ್ಮವೂ ಮುಖ್ಯವಾಗಿದೆ. ಧರ್ಮವೆಂದರೆ ಜಾತಿಯಲ್ಲ,



ಜಾತಿಗಿಂತ ಧರ್ಮ ದೊಡ್ಡದು. ಧರ್ಮದಲ್ಲಿರುವ ವಿಶಾಲ ಮನೋಭಾವನೆ ಮಾನವೀಯ ಮೌಲ್ಯಗಳನ್ನು ಬೆಳೆಸುತ್ತದೆ. ದೇವರು, ಧರ್ಮ ಮತ್ತು ಗುರುಗಳು ಜೀವನದ ವಿಕಾಸಕ್ಕೆ ಅವಶ್ಯಕವಾಗಿದ್ದು, ಸತ್ಯದ ತಳಹದಿಯ ಮೇಲೆ ಮಾನವ ಜೀವನ ರೂಪುಗೊಳ್ಳಬೇಕು ಎಂದು ಹೇಳಿದರು.

ಶ್ರೀ ಜಗದ್ಗುರು ರೇಣುಕಾಚಾರ್ಯರು ಹಾಗೂ ಶ್ರೀ ಜಗದ್ಗುರು ರೇವಣಸಿದ್ಧೇಶ್ವರರು ಬೋಧಿಸಿದ ಧಾರ್ಮಿಕ ಮತ್ತು ಸಾಮಾಜಿಕ ಮೌಲ್ಯಗಳು ಇಂದಿಗೂ ಪ್ರಸ್ತುತವಾಗಿವೆ. ಅವರ ದಶವಿಧ ಸೂತ್ರಗಳು ಬದುಕಿನ ವಿಕಾಸಕ್ಕೆ ಮಾರ್ಗದರ್ಶಿಯಾಗಿವೆ ಎಂದು ತಿಳಿಸಿದರು.

> "ಭೌತಿಕ ಸಂಪತ್ತು ಜೀವನಕ್ಕೆ ಸೌಕರ್ಯ ನೀಡಬಹುದು. ಆದರೆ ಶಾಂತಿ ಮತ್ತು ನೆಮ್ಮದಿಯನ್ನು ನೀಡುವುದು ಧರ್ಮಾಚರಣೆ ಮಾತ್ರ. ಜಾತಿಗಿಂತ ಧರ್ಮ ದೊಡ್ಡದು ಎಂಬ ಅರಿವು ಸಮಾಜದಲ್ಲಿ ಬೆಳೆಯಬೇಕು."
> – ಡಾ. ವೀರಸೋಮೇಶ್ವರ ಜಗದ್ಗುರುಗಳು, ಶ್ರೀ ರಂಭಾಪುರಿ ಪೀಠ

ಹೊನ್ನಕಿರಣಗಿ ಚಂದ್ರಗುಂಡ ಶಿವಾಚಾರ್ಯ ಸ್ವಾಮಿಗಳು ಧರ್ಮ ಜಾಗೃತಿ ಸಮಾರಂಭ ಉದ್ಘಾಟಿಸಿ ವೀರಶೈವ ಧರ್ಮದ ಮೌಲ್ಯಗಳ ಕುರಿತು ಮಾತನಾಡಿದರು. ಮೇಹಕರ ಹಿರೇಮಠದ ರಾಜೇಶ್ವರ ಶಿವಾಚಾರ್ಯ ಸ್ವಾಮಿಗಳು ದೇವಾಲಯ ಸಂಸ್ಕೃತಿ ಹಾಗೂ ಅದರ ಸಾಮಾಜಿಕ ಪರಿಣಾಮಗಳ ಕುರಿತು ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ಶ್ರೀನಿವಾಸ ಸರಡಗಿ, ಸುಗೂರು, ನರನಾಳ, ಆಂದೋಲಾ, ಮಂಗಲಗಿ, ತೆಂಗಳಿ, ಕೊಡ್ಲಿ, ರಟಕಲ್, ನಾಗೂರು, ಹೊಸಳ್ಳಿ, ಐನಾಪುರ ಸೇರಿದಂತೆ ವಿವಿಧ ಮಠಗಳ ಶ್ರೀಗಳು ಪಾಲ್ಗೊಂಡಿದ್ದರು. ಕೆಪಿಸಿಸಿ ಉಪಾಧ್ಯಕ್ಷ ಸುಭಾಷ ರಾಠೋಡ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

ಇದಕ್ಕೂ ಮುನ್ನ ಗೊಣಗಿ ಗ್ರಾಮದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳ ಅಡ್ಡಪಲ್ಲಕ್ಕಿ ಮಹೋತ್ಸವ ಸಡಗರ-ಸಂಭ್ರಮದಿಂದ ನಡೆಯಿತು. ನಂತರ ರೇವಗ್ಗಿ-ರಟಕಲ್‌ನ ಶ್ರೀ ಜಗದ್ಗುರು ರೇವಣಸಿದ್ಧೇಶ್ವರ ದೇವಸ್ಥಾನಕ್ಕೆ ಭೇಟಿ ನೀಡಿ ವಿಶೇಷ ಪೂಜೆ ಸಲ್ಲಿಸಲಾಯಿತು.

### ಸೊಳ್ಳೆ ನಿಯಂತ್ರಣಕ್ಕೆ ಸ್ವಚ್ಛತೆ ಮತ್ತು ಮುನ್ನೆಚ್ಚರಿಕೆ ಕ್ರಮ ಪಾಲಿಸಲು ಕರೆ

# ಮಲೇರಿಯಾ ನಿರ್ಮೂಲನೆಗೆ ಜನಸಹಭಾಗಿತ್ವ ಅಗತ್ಯ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

"ಮಲೇರಿಯಾ ಅಂತ್ಯಗೊಳಿಸಲು ಸಕಲರೂ ಸಂಕಲ್ಪ ಮಾಡೋಣ, ನಮಗಿದು ಸಾಧ್ಯವಿದೆ, ನಾವು ಇದನ್ನು ಮಾಡಲೇಬೇಕು" ಎಂಬ ಘೋಷವಾಕ್ಯದೊಂದಿಗೆ ಮಲೇರಿಯಾ ನಿರ್ಮೂಲನೆಗೆ ಸಾರ್ವಜನಿಕರ ಸಹಕಾರ ಅತ್ಯಗತ್ಯ ಎಂದು ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಸಹದೇವಪ್ಪ ಹನಕನಹಳ್ಳಿ ಹೇಳಿದರು.

ಶಿಗ್ಲಿಯ ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಗ್ರಾಮ ಪಂಚಾಯಿತಿ ಆಶ್ರಯದಲ್ಲಿ ಮಲೇರಿಯಾ ವಿರೋಧಿ ಮಾಸಾಚರಣೆ ಅಂಗವಾಗಿ ಆಯೋಜಿಸಿದ್ದ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಮಲೇರಿಯಾ ಪರಾವಲಂಬಿ ಜೀವಿಗಳಿಂದ ಉಂಟಾಗುವ ಸಾಂಕ್ರಾಮಿಕ ರೋಗವಾಗಿದ್ದು, ಹೆಣ್ಣು ಅನಾಫಿಲೀಸ್ ಸೊಳ್ಳೆಯ ಕಡಿತದಿಂದ ಹರಡುತ್ತದೆ. ಸೋಂಕಿನ ಲಕ್ಷಣಗಳು ಸಾಮಾನ್ಯವಾಗಿ 7ರಿಂದ 14 ದಿನಗಳೊಳಗೆ ಕಾಣಿಸಿಕೊಳ್ಳುತ್ತವೆ. ಚಳಿ, ತೀವ್ರ ಜ್ವರ ಹಾಗೂ ಬೆವರುವುದು ಪ್ರಮುಖ ಲಕ್ಷಣಗಳಾಗಿದ್ದು, ಯಾವುದೇ ರೀತಿಯ ಜ್ವರ ಕಂಡುಬಂದರೂ ತಕ್ಷಣ ರಕ್ತ ಪರೀಕ್ಷೆ ಮಾಡಿಸಿಕೊಂಡು



> "ಮಲೇರಿಯಾ ನಿರ್ಮೂಲನೆ ಕೇವಲ ಆರೋಗ್ಯ ಇಲಾಖೆಯ ಜವಾಬ್ದಾರಿ ಅಲ್ಲ. ಪ್ರತಿಯೊಬ್ಬ ನಾಗರಿಕರೂ ಸ್ವಚ್ಛತೆ ಕಾಪಾಡಿ ಸೊಳ್ಳೆ ನಿಯಂತ್ರಣ ಕ್ರಮಗಳನ್ನು ಪಾಲಿಸಿದರೆ ಮಾತ್ರ ರೋಗವನ್ನು ಸಂಪೂರ್ಣವಾಗಿ ತಡೆಗಟ್ಟಬಹುದು."
> – ಸಹದೇವಪ್ಪ ಹನಕನಹಳ್ಳಿ, ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ

ಚಿಕಿತ್ಸೆ ಪಡೆಯಬೇಕು ಎಂದು ಸಲಹೆ ನೀಡಿದರು.

ಮನೆ ಹಾಗೂ ಸುತ್ತಮುತ್ತಲಿನ ಪ್ರದೇಶವನ್ನು ಸ್ವಚ್ಛವಾಗಿಡುವುದು, ನೀರು ನಿಲ್ಲದಂತೆ ನೋಡಿಕೊಳ್ಳುವುದು, ಸೊಳ್ಳೆ ಪರದೆ ಹಾಗೂ ಸೊಳ್ಳೆ ನಿವಾರಕ ಕ್ರಮಗಳನ್ನು ಅನುಸರಿಸುವುದರಿಂದ ಮಲೇರಿಯಾ ತಡೆಗಟ್ಟಲು ಸಾಧ್ಯ ಎಂದು ತಿಳಿಸಿದರು.

ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಎಫ್.ಸಿ. ಹೊಸಮಠ ಮಾತನಾಡಿ, ಆರೋಗ್ಯ ಇಲಾಖೆಯ ಜಾಗೃತಿ ಕಾರ್ಯಕ್ರಮಗಳು ಸಾರ್ವಜನಿಕರಲ್ಲಿ ಆರೋಗ್ಯ ಅರಿವು ಮೂಡಿಸುವುದರ ಜೊತೆಗೆ ಸಾಂಕ್ರಾಮಿಕ ರೋಗಗಳ ನಿಯಂತ್ರಣಕ್ಕೂ ಸಹಕಾರಿಯಾಗುತ್ತವೆ ಎಂದರು.

ಕಾರ್ಯಕ್ರಮದಲ್ಲಿ ಆರೋಗ್ಯ ಇಲಾಖೆಯ ಅಧಿಕಾರಿಗಳು, ಆಶಾ ಕಾರ್ಯಕರ್ತೆಯರು, ಗ್ರಾಮ ಪಂಚಾಯಿತಿ ಸಿಬ್ಬಂದಿ ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು.

# 18 ವರ್ಷಗಳ ದಾಂಪತ್ಯಕ್ಕೆ ದುರಂತ ಅಂತ್ಯ

■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಕೌಟುಂಬಿಕ ಕಲಹ, ಪೊಲೀಸ್ ಠಾಣೆ ಸುತ್ತಾಟ ಹಾಗೂ ದಾಂಪತ್ಯ ಬಿಕ್ಕಟ್ಟಿನ ನಡುವೆ ವ್ಯಕ್ತಿಯೊಬ್ಬ ಡೆತ್‌ನೋಟ್ ಬರೆದಿಟ್ಟು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಹುಬ್ಬಳ್ಳಿಯ ಬೆಂಗೇರಿ ಪ್ರದೇಶದಲ್ಲಿ ನಡೆದಿದೆ.

ಸಂತೋಷ್ ಅಳ್ನೂರು (39) ಮೃತ ವ್ಯಕ್ತಿಯಾಗಿದ್ದು, ಮನೆಯಲ್ಲಿ ನೇಣು ಬಿಗಿದುಕೊಂಡ ಸ್ಥಿತಿಯಲ್ಲಿ ಪತ್ತೆಯಾಗಿದ್ದಾರೆ. ಆತ್ಮಹತ್ಯೆಗೆ ಮುನ್ನ ಅವರು ಡೆತ್‌ನೋಟ್ ಬರೆದಿಟ್ಟು ಹೋಗಿರುವುದಾಗಿ ತಿಳಿದುಬಂದಿದೆ.

ಸಂತೋಷ್ ಮತ್ತು ಅವರ ಪತ್ನಿ ಸುಮಾರು 18 ವರ್ಷಗಳ ಹಿಂದೆ ಪ್ರೀತಿಸಿ ವಿವಾಹವಾಗಿದ್ದರು. ದಂಪತಿಗೆ ಮೂವರು ಮಕ್ಕಳಿದ್ದು, ಇತ್ತೀಚಿನ ದಿನಗಳಲ್ಲಿ ಇಬ್ಬರ ನಡುವೆ ಕೌಟುಂಬಿಕ ಕಲಹ ತೀವ್ರಗೊಂಡಿತ್ತು ಎನ್ನಲಾಗಿದೆ.

ಪತ್ನಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದು, ನಂತರ ವಿಚ್ಛೇದನಕ್ಕೆ ಅರ್ಜಿ ಸಲ್ಲಿಸಿ ಪತಿಯಿಂದ ದೂರವಾಗಲು ಮುಂದಾಗಿದ್ದರು ಎಂಬ ಮಾಹಿತಿ ಲಭ್ಯವಾಗಿದೆ.

ಕುಟುಂಬದವರ ಆರೋಪದ ಪ್ರಕಾರ, ಪೊಲೀಸ್ ಠಾಣೆಗೆ ಪದೇ ಪದೇ ಕರೆಸಿ ಕಿರುಕುಳ ನೀಡಲಾಗುತ್ತಿತ್ತು. ಇದರಿಂದ ತೀವ್ರ ಮಾನಸಿಕ ಒತ್ತಡಕ್ಕೆ ಒಳಗಾಗಿದ್ದ ಸಂತೋಷ್ ಕೊನೆಗೆ ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ಘಟನೆ ಬಳಿಕ ಕುಟುಂಬಸ್ಥರು ಪತ್ನಿ ಹಾಗೂ ಸಂಬಂಧಿತ ಪೊಲೀಸರ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದು, ಸಾವಿನ ಹಿಂದಿನ ಕಾರಣಗಳ ಕುರಿತು ಸಮಗ್ರ ತನಿಖೆ ನಡೆಸುವಂತೆ ಆಗ್ರಹಿಸಿದ್ದಾರೆ. ಕೇಶ್ವಾಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಡೆತ್‌ನೋಟ್ ಸೇರಿದಂತೆ ಎಲ್ಲಾ ಆಯಾಮಗಳ ಬಗ್ಗೆ ತನಿಖೆ ನಡೆಯುತ್ತಿದೆ

### ಗಿಡಗಳ ಸಂರಕ್ಷಣೆ ಪ್ರತಿಯೊಬ್ಬರ ಕರ್ತವ್ಯ: ಪರಿಸರ ಉಳಿವಿಗೆ ಜನಜಾಗೃತಿ ಅಗತ್ಯ: ಸಿ.ಎಸ್. ಶಿವನಗೌಡ್ರ

# ತಾಯಿಯ ಹೆಸರಿನಲ್ಲಿ ಒಂದು ಗಿಡ ನೆಟ್ಟು ಪೋಷಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಪರಿಸರ ಸಂರಕ್ಷಣೆ ಕೇವಲ ಒಂದು ದಿನದ ಆಚರಣೆಗೆ ಸೀಮಿತವಾಗಬಾರದು. ಪ್ರತಿಯೊಬ್ಬರೂ ತಮ್ಮ ತಾಯಿಯ ಹೆಸರಿನಲ್ಲಿ ಕನಿಷ್ಠ ಒಂದು ಗಿಡ ನೆಟ್ಟು ಪೋಷಿಸುವ ಮೂಲಕ ಪರಿಸರ ರಕ್ಷಣೆಗೆ ಕೈಜೋಡಿಸಬೇಕು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡ್ರ ಕರೆ ನೀಡಿದರು.

ಜಿಲ್ಲಾಡಳಿತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಸಾರ್ವಜನಿಕ ಶಿಕ್ಷಣ ಇಲಾಖೆ ಹಾಗೂ ಸಿ.ಡಿ.ಒ. ಜೈನ್ ಶಿಕ್ಷಣ



ಸಂಸ್ಥೆಯ ಸಹಯೋಗದಲ್ಲಿ ಆಯೋಜಿಸಿದ್ದ ವಿಶ್ವ ಪರಿಸರ ದಿನಾಚರಣೆಯ ಸಮಾರೋಪ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಪರಿಸರ ದಿನಾಚರಣೆ ಎಂದರೆ ಭೂಮಿತಾಯಿಯ ಆರಾಧನೆ ಮಾಡಿದಂತೆ. ವಾಯು ಮಾಲಿನ್ಯ ತಡೆಗಟ್ಟಲು ಹಾಗೂ ಪರಿಸರ ಸಮತೋಲನ ಕಾಪಾಡಲು ಗಿಡ-ಮರಗಳ ಬೆಳವಣಿಗೆ ಅತ್ಯಗತ್ಯವಾಗಿದೆ. ಮರಗಳನ್ನು ಬೆಳೆಸುವುದು ಮತ್ತು ಉಳಿಸುವುದು ಪ್ರತಿಯೊಬ್ಬ ನಾಗರಿಕನ ಜವಾಬ್ದಾರಿಯಾಗಿದೆ ಎಂದು ಹೇಳಿದರು.

ಇಂದಿನ ಜೀವನಶೈಲಿಯಲ್ಲಿ ಪರಿಸರದ ಮೇಲಿನ ಒತ್ತಡ ಹೆಚ್ಚುತ್ತಿದ್ದು, ಪ್ರಕೃತಿಯ ಸಮತೋಲನ ಹದಗೆಡುತ್ತಿದೆ. ಮನುಷ್ಯನ ಅತಿಯಾದ ಸ್ವಾರ್ಥ ಮತ್ತು ಪ್ರಕೃತಿ ಸಂಪನ್ಮೂಲಗಳ ದುರ್ಬಳಕೆಯಿಂದ ಉಷ್ಣಾಂಶ ಹೆಚ್ಚಳ, ಮಳೆಯ ಕೊರತೆ ಹಾಗೂ ಪರಿಸರ ವೈಪರೀತ್ಯಗಳು ಉಂಟಾಗುತ್ತಿವೆ ಎಂದು ಆತಂಕ ವ್ಯಕ್ತಪಡಿಸಿದರು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಶಾಲಾ ಶಿಕ್ಷಣ ಇಲಾಖೆಯ ವಿಷಯ ಪರಿವೀಕ್ಷಕಿ ಗೀತಾ ಕುಲಕರ್ಣಿ ಮಾತನಾಡಿ, ಪರಿಸರ ಸಂರಕ್ಷಣೆ ಪ್ರತಿಯೊಬ್ಬ ನಾಗರಿಕನ ಕರ್ತವ್ಯವಾಗಿದೆ.

> "ಪ್ರತಿಯೊಬ್ಬರೂ ತಮ್ಮ ತಾಯಿಯ ಹೆಸರಿನಲ್ಲಿ ಒಂದು ಗಿಡ ನೆಟ್ಟು ಪೋಷಿಸಿದರೆ ಪರಿಸರ ಸಂರಕ್ಷಣೆಗೆ ಅದು ಅತ್ಯುತ್ತಮ ಕೊಡುಗೆಯಾಗುತ್ತದೆ. ಗಿಡಗಳನ್ನು ಬೆಳೆಸುವುದು ಮಾತ್ರವಲ್ಲ, ಅವುಗಳನ್ನು ಉಳಿಸುವ ಜವಾಬ್ದಾರಿಯೂ ನಮ್ಮದಾಗಿದೆ."
> **– ಸಿ.ಎಸ್. ಶಿವನಗೌಡ್ರ,** ಸದಸ್ಯ ಕಾರ್ಯದರ್ಶಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ

ಮರಗಳನ್ನು ಕಡಿಯುವುದರಿಂದ ನಮ್ಮ ವಿನಾಶಕ್ಕೆ ನಾವೇ ಕಾರಣರಾಗುತ್ತಿದ್ದು, ರೈತರು ತಮ್ಮ ಜಮೀನುಗಳ ಬದುಗಳಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಮರಗಳನ್ನು ಬೆಳೆಸಬೇಕು ಎಂದು ಸಲಹೆ ನೀಡಿದರು.

ಪ್ಲಾಸ್ಟಿಕ್ ಮುಕ್ತ ಸಮಾಜ ನಿರ್ಮಾಣದ ಸಂಕಲ್ಪವನ್ನು ಪ್ರತಿಯೊಬ್ಬರೂ ಕೈಗೊಳ್ಳಬೇಕು. ಪರಿಸರ ಉಳಿವಿಗೆ ಸಣ್ಣ ಪ್ರಯತ್ನಗಳೂ ದೊಡ್ಡ ಬದಲಾವಣೆಗೆ ಕಾರಣವಾಗುತ್ತವೆ ಎಂದು ಹೇಳಿದರು.

ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಪರಿಸರ ಅಧಿಕಾರಿ ಲೋಹಿತ್ ಕುಮಾರ್ ಪಿ.ಜೆ. ಪ್ರಾಸ್ತಾವಿಕವಾಗಿ ಮಾತನಾಡಿ, ಪರಿಸರ ಸಂರಕ್ಷಣೆಗೆ ಸಂಬಂಧಿಸಿದ ಕಾನೂನುಗಳು ಹಾಗೂ ಸಾರ್ವಜನಿಕರ ಜವಾಬ್ದಾರಿಗಳ ಕುರಿತು ಮಾಹಿತಿ ನೀಡಿದರು.

#### 300ಕ್ಕೂ ಹೆಚ್ಚು ವಿದ್ಯಾರ್ಥಿಗಳಿಂದ ಸ್ಪರ್ಧೆಗಳಲ್ಲಿ ಭಾಗಿ

ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಪ್ರಾಥಮಿಕ ಹಾಗೂ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಚಿತ್ರಕಲೆ ಮತ್ತು ಪ್ರಬಂಧ ಸ್ಪರ್ಧೆಗಳನ್ನು ಆಯೋಜಿಸಲಾಗಿತ್ತು. ನಗರ ಹಾಗೂ ಸುತ್ತಮುತ್ತಲಿನ ಶಾಲೆಗಳ ಸುಮಾರು 300ಕ್ಕೂ ಹೆಚ್ಚು ವಿದ್ಯಾರ್ಥಿಗಳು ಭಾಗವಹಿಸಿದ್ದರು. ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ಹಾಗೂ ಪ್ರಮಾಣಪತ್ರ ವಿತರಿಸಿ ಸನ್ಮಾನಿಸಲಾಯಿತು.

# ಜಿಎಸ್‌ಪಿ ಸಚಿವ ಸ್ಥಾನಕ್ಕೆ ಕಾರ್ಯಕರ್ತರ ಪಾದಯಾತ್ರೆ



■ ವಿಜಯಸಾಕ್ಷಿ ಸುದ್ದಿ, ಡಂಬಳ

ರೋಣ ಕ್ಷೇತ್ರದ ಶಾಸಕ ಹಾಗೂ ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಜಿ.ಎಸ್. ಪಾಟೀಲ ಅವರಿಗೆ ರಾಜ್ಯ ಸಚಿವ ಸಂಪುಟದ ಎರಡನೇ ವಿಸ್ತರಣೆಯಲ್ಲಿ ಸಚಿವ ಸ್ಥಾನ ನೀಡುವಂತೆ ಆಗ್ರಹಿಸಿ ಕಾಂಗ್ರೆಸ್ ಕಾರ್ಯಕರ್ತರು ವಿಶೇಷ ಪಾದಯಾತ್ರೆ ಕೈಗೊಂಡಿದ್ದಾರೆ.

ಡಂಬಳ ಗ್ರಾಮದಿಂದ ಪಾದಯಾತ್ರೆಗೆ ತೆರಳುವ ಮುನ್ನ ಮಾತನಾಡಿದ ಕಾಂಗ್ರೆಸ್ ಯುವ ಮುಖಂಡ ಬಸವರಡ್ಡಿ ಬಂಡಿಹಾಳ, ರೋಣ ಕ್ಷೇತ್ರದ ಅಭಿವೃದ್ಧಿ ಹಾಗೂ ಕಾಂಗ್ರೆಸ್ ಪಕ್ಷದ ಸಂಘಟನೆಗೆ ಜಿ.ಎಸ್. ಪಾಟೀಲ ಅವರ ಕೊಡುಗೆ ಅಪಾರವಾಗಿದೆ. ಅವರಿಗೆ ಸಚಿವ ಸ್ಥಾನ ನೀಡಬೇಕು ಎಂಬುದು ಕ್ಷೇತ್ರದ ಕಾರ್ಯಕರ್ತರ ಬಹುಕಾಲದ ಬೇಡಿಕೆಯಾಗಿದ್ದು, ಪಕ್ಷದ ವರಿಷ್ಠರು ಈ ಬೇಡಿಕೆಗೆ ಸ್ಪಂದಿಸುವ ವಿಶ್ವಾಸವಿದೆ ಎಂದು ಹೇಳಿದರು.

ತುಮಕೂರಿನ ಸಿದ್ದಗಂಗಾ ಮಠದಿಂದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ನಿವಾಸದವರೆಗೆ ಬುಧವಾರ ಮತ್ತು ಗುರುವಾರ ಪಾದಯಾತ್ರೆ ನಡೆಯಲಿದ್ದು, ಇದರ ಮೂಲಕ ಪಕ್ಷದ ವರಿಷ್ಠರ ಗಮನ ಸೆಳೆದು ಜಿ.ಎಸ್. ಪಾಟೀಲ ಅವರಿಗೆ ಸಚಿವ ಸ್ಥಾನ ದೊರಕಿಸಿಕೊಡುವ ಉದ್ದೇಶ ಹೊಂದಲಾಗಿದೆ ಎಂದು ತಿಳಿಸಿದರು.

ಪಾದಯಾತ್ರೆಯಲ್ಲಿ ಮರಿಯಪ್ಪ ಸಿದ್ದಣ್ಣವರ, ಕುಬೇರಪ್ಪ ಕೊಳ್ಳಾರ, ಮಹೇಶ ಗಡಗಿ, ಮಂಜುನಾಥ ಸಂಜೀವಣ್ಣವರ, ಸುರೇಶ ಗಡಗಿ, ಹನಮಂತಪ್ಪ ಗದಗಿನ, ಶರಣು ಬಂಡಿಹಾಳ, ಬಾಬುಸಾಬ ಮೂಲಿಮನಿ, ಮಲ್ಲಿಕಾರ್ಜುನ ಪ್ಯಾಟಿ, ರಾಜು ಆದಮ್ಮನವರ, ಮುತ್ತಣ್ಣ ಕೊಂತಿಕಲ್ಲ, ಬಸವರಾಜ ಶಿರೋಳ, ಸೌಕತಲಿ ಡೋಲಿ, ಮಹೇಶ ಬಿಸನಳ್ಳಿ, ಭೀಮಪ್ಪ ಗದಗಿನ, ತಿರಕಪ್ಪ ಕಟ್ಟೆಣ್ಣವರ, ಅಲ್ಲಾವುದ್ದೀನ್ ಹೊಂಬಳ, ಕಳ್ಳೆಪ್ಪ ಪೂಜಾರ, ಮಂಜುನಾಥ ನರಗುಂದ, ಮಾಬುಸಾಬ ಬೆಟಗೇರಿ, ಮರಿಯಪ್ಪ ಹಳ್ಳಾಕಾರ, ಮಹೆಬೂಬಸಾಬ ಆಲೂರ ಸೇರಿದಂತೆ ಅನೇಕ ಕಾಂಗ್ರೆಸ್ ಕಾರ್ಯಕರ್ತರು ಭಾಗವಹಿಸಿದ್ದರು.

### ನರಗುಂದದ ಬಸವೇಶ್ವರ ನಗರ ಕೇಂದ್ರದಲ್ಲಿ ಮಕ್ಕಳಿಗೆ ಶೈಕ್ಷಣಿಕ ಸಾಮಗ್ರಿ ವಿತರಣೆ

# ಅಂಗನವಾಡಿಯಲ್ಲಿ ಎಲ್‌ಕೆಜಿ-ಯುಕೆಜಿ ಪ್ರಾರಂಭೋತ್ಸವ

■ ವಿಜಯಸಾಕ್ಷಿ ಸುದ್ದಿ, ಗದಗ

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಶಿಶು ಅಭಿವೃದ್ಧಿ ಯೋಜನೆ, ನರಗುಂದ ವತಿಯಿಂದ ಬಸವೇಶ್ವರ ನಗರದ ನರಗುಂದ-91ನೇ ಅಂಗನವಾಡಿ ಕೇಂದ್ರದಲ್ಲಿ ಎಲ್‌ಕೆಜಿ ಮತ್ತು ಯುಕೆಜಿ ಪ್ರಾರಂಭೋತ್ಸವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.



ಸರಸ್ವತಿ ಪೂಜೆಯೊಂದಿಗೆ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು. ಪೋಷಣ್ ಅಭಿಯಾನ ಸಂಯೋಜಕ ಮಂಜುನಾಥ ಗುಗ್ಗರಿ ಪ್ರಾಸ್ತಾವಿಕವಾಗಿ ಮಾತನಾಡಿ, ಅಂಗನವಾಡಿ ಕೇಂದ್ರಗಳಲ್ಲಿ ದಾಖಲಾತಿ ಪಡೆಯುವ ಮಕ್ಕಳಿಗೆ ಉಚಿತ ಪೂರ್ವ ಪ್ರಾಥಮಿಕ ಶಿಕ್ಷಣದ ಜೊತೆಗೆ ಸಮವಸ್ತ್ರ, ಶಾಲಾ ಬ್ಯಾಗ್ ಹಾಗೂ ಪುಸ್ತಕಗಳು ದೊರೆಯಲಿದ್ದು, ಇದು ಮಕ್ಕಳ ಹಾಗೂ ಪೋಷಕರಲ್ಲಿ ಆತ್ಮವಿಶ್ವಾಸ ಮೂಡಿಸುವ ಕಾರ್ಯವಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ನಿವೃತ್ತ ನೌಕರರಾದ ದೇವಮ್ಮ ಹೂಗಾರ ಅವರು ಮಕ್ಕಳಿಗೆ ಸಮವಸ್ತ್ರ, ಶಾಲಾ ಬ್ಯಾಗ್, ವಾಟರ್ ಬಾಟಲ್ ಹಾಗೂ ಶೂಗಳನ್ನು ವಿತರಿಸಿ ಶಿಕ್ಷಣಕ್ಕೆ ಪ್ರೋತ್ಸಾಹ ನೀಡಿದರು.

ಮಕ್ಕಳ ಆಕರ್ಷಣೆಗಾಗಿ ವಿಶೇಷ ಸೆಲ್ಫಿ ಬೂತ್‌ನ್ನು ನಿರ್ಮಿಸಿ ಮಕ್ಕಳ ಛಾಯಾಚಿತ್ರಗಳನ್ನು ಸೆರೆಹಿಡಿಯಲಾಯಿತು.

ಅಂಗನವಾಡಿ ಮೇಲ್ವಿಚಾರಕಿ ಶಕುಂತಲಾ ಗಣಿ ಮಾತನಾಡಿ, ಖಾಸಗಿ ಶಾಲೆಗಳ ವ್ಯಾಮೋಹಕ್ಕೆ ಒಳಗಾಗದೆ ಸಾರ್ವಜನಿಕರು ತಮ್ಮ ಸಮೀಪದ ಅಂಗನವಾಡಿ ಕೇಂದ್ರಗಳಲ್ಲಿ ಲಭ್ಯವಿರುವ ಉಚಿತ ಹಾಗೂ ಗುಣಮಟ್ಟದ ಪೂರ್ವ ಪ್ರಾಥಮಿಕ ಶಿಕ್ಷಣ ಸೌಲಭ್ಯವನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಪ್ರಾಥಮಿಕ ಶಾಲೆಯ ಪ್ರಧಾನ ಗುರುಗಳಾದ ಎಸ್.ಎನ್. ಪವಾರ, ನಿಂಗಪ್ಪ ಲಿಂಗದಾಳ, ಪಾರ್ವತಿ ಹಿರೇಮಠ, ಈರಮ್ಮ ಸಂಗನಹಾಳ, ಪೂಜಾ ಮೇಲಿನಮನಿ, ಅಲ್ತಾಪ ನವಲಗುಂದ, ಅಂಗನವಾಡಿ ಕಾರ್ಯಕರ್ತೆಯರು, ಸಹಾಯಕಿಯರು, ಮಕ್ಕಳು ಹಾಗೂ ಪಾಲಕರು ಭಾಗವಹಿಸಿದ್ದರು.

ಬಿ.ಬಿ. ಗುಡಿಕಾರ ಕಾರ್ಯಕ್ರಮ ನಿರೂಪಿಸಿದರು. ಪಾರ್ವತಿ ಹೂಗಾರ ವಂದಿಸಿದರು.

## ಜಿ.ಎಸ್.ಪಿಗೆ ಸಚಿವ ಸ್ಥಾನಕ್ಕಾಗಿ ಮಠಾಧೀಶರ ಒತ್ತಡ

▶▶ ಮೊದಲನೇ ಪುಟದಿಂದ

ಕೊತಬಾಳ ಅಂಕಲಿ ಮಠದ ಗಂಗಾಧರ ಶ್ರೀಗಳು, ಜಿಗೇರಿ ಮಠದ ಗುರುಸಿದ್ಧ ಶಿವಾಚಾರ್ಯರು ಹಾಗೂ ಇತರ ಮಠಾಧೀಶರು ಸಹ ಜಿ.ಎಸ್. ಪಾಟೀಲರಿಗೆ ಸಚಿವ ಸ್ಥಾನ ನೀಡಬೇಕು ಎಂದು ಒತ್ತಾಯಿಸಿದರು. ಈ ಸಂದರ್ಭದಲ್ಲಿ ವೇ.ಮೂ. ರೇವಣಸಿದ್ದೇಶ್ವರ ಶ್ರೀಗಳು, ಜಂಗಮ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ವಿ.ಬಿ. ಸೋಮನಕಟ್ಟಿಮಠ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಆರ್‌ಎಸ್‌ಎಸ್ ಬಗ್ಗೆ ಖರ್ಗೆ ತಿಳಿದುಕೊಂಡು ಮಾತನಾಡಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರು ಆರ್‌ಎಸ್‌ಎಸ್ ಕುರಿತು ಟೀಕೆ ಮಾಡುವ ಮುನ್ನ ಸಂಘದ ಕಾರ್ಯವೈಖರಿ ಮತ್ತು ಇತಿಹಾಸವನ್ನು ಅರಿತುಕೊಳ್ಳಬೇಕು ಎಂದು ಗದಗ ಜಿಲ್ಲಾ ಬಿಜೆಪಿ ಪ್ರಕೋಷ್ಠಗಳ ಸಹ ಸಂಯೋಜಕ ರಮೇಶ ಎನ್. ಸಜ್ಜಗಾರ ಹೇಳಿದ್ದಾರೆ.



ಈ ಕುರಿತು ಪ್ರಕಟಣೆ ನೀಡಿರುವ ಅವರು, ರಾಷ್ಟ್ರೀಯ ಸ್ವಯಂಸೇವಕ ಸಂಘ ಕಳೆದ ನೂರು ವರ್ಷಗಳಿಂದ ಸಮಾಜಮುಖಿ ಹಾಗೂ ರಾಷ್ಟ್ರ ನಿರ್ಮಾಣದ ಕಾರ್ಯಗಳಲ್ಲಿ ತೊಡಗಿಸಿಕೊಂಡಿದೆ ಎಂದು ತಿಳಿಸಿದ್ದಾರೆ.

ಸಂಘವು ದೇಶದ ಸಾಂಸ್ಕೃತಿಕ ಪರಂಪರೆ, ರಾಷ್ಟ್ರೀಯ ಮೌಲ್ಯಗಳು ಹಾಗೂ ವ್ಯಕ್ತಿತ್ವ ವಿಕಾಸಕ್ಕೆ ಒತ್ತು ನೀಡುತ್ತಿದ್ದು, ಪ್ರಕೃತಿ ವಿಕೋಪಗಳು ಹಾಗೂ ಸಂಕಷ್ಟದ ಸಂದರ್ಭಗಳಲ್ಲಿ ಸ್ವಯಂಸೇವಕರು ಸೇವಾ ಕಾರ್ಯಗಳಲ್ಲಿ ಭಾಗಿಯಾಗುತ್ತಿದ್ದಾರೆ ಎಂದು ಹೇಳಿದ್ದಾರೆ. ಆರ್‌ಎಸ್‌ಎಸ್ ಕುರಿತು ಅಭಿಪ್ರಾಯ ವ್ಯಕ್ತಪಡಿಸುವ ಮುನ್ನ ಅದರ ಕಾರ್ಯಚಟುವಟಿಕೆಗಳನ್ನು ಪ್ರತ್ಯಕ್ಷವಾಗಿ ತಿಳಿದುಕೊಳ್ಳುವುದು ಅಗತ್ಯ. ಪ್ರಿಯಾಂಕ್ ಖರ್ಗೆ ಅವರು ಒಂದು ವಾರ ಸಂಘದ ಶಾಖೆಯಲ್ಲಿ ಭಾಗವಹಿಸಿದರೆ ಸಂಘದ ಕಾರ್ಯಗಳ ಬಗ್ಗೆ ಸ್ಪಷ್ಟ ಅರಿವು ಮೂಡಲಿದೆ ಎಂದು ರಮೇಶ ಸಜ್ಜಗಾರ ಅಭಿಪ್ರಾಯಪಟ್ಟಿದ್ದಾರೆ.

### 'ಗುರ್ಜಿ... ಗುರ್ಜಿ...' ಎಂದು ಮಳೆರಾಯನ ಮೊರೆ ಹೋದ ರೈತ ಮಹಿಳೆಯರು

# ಕಾರ ಮಳೆಯೇ... ಕಪ್ಪತ್ತ ಮಳೆಯೇ...

ಅಬ್ಬಿಗೇರಿಯಲ್ಲಿ ಸಾಂಪ್ರದಾಯಿಕ ಗುರ್ಜಿ ಪೂಜೆ; ಉತ್ತಮ ಮಳೆಗಾಗಿ ಜನಪದ ಗೀತೆಗಳೊಂದಿಗೆ ಪ್ರಾರ್ಥನೆ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

"ಗುರ್ಜಿ... ಗುರ್ಜಿ... ಎಲ್ಲಾಡಿ ಬಂದೆ... ಹಳ್ಳ-ಕೊಳ್ಳ ತಿರುಗಾಡಿ ಬಂದೆ... ಕಾರ ಮಳೆಯೇ, ಕಪ್ಪತ್ತ ಮಳೆಯೇ..." ಎಂಬ ಜನಪದ ಗೀತೆಯ ನಿನಾದದೊಂದಿಗೆ ಸಮೀಪದ ಅಬ್ಬಿಗೇರಿ ಗ್ರಾಮದ ಗೌಡ್ರ ಓಣಿಯ ರೈತ ಮಹಿಳೆಯರು ಸಾಂಪ್ರದಾಯಿಕ ಗುರ್ಜಿ ಪೂಜೆ ನೆರವೇರಿಸಿ ಮಳೆರಾಯನಿಗೆ ಮೊರೆ ಹೋದರು.



ಮುಂಗಾರು ಆರಂಭದಲ್ಲಿ ಸುರಿದ ಅಲ್ಪ ಪ್ರಮಾಣದ ಮಳೆಯನ್ನೇ ನಂಬಿ ರೈತರು ಶೇಂಗಾ, ತೊಗರಿ, ಹೆಸರು ಹಾಗೂ ಗೋವಿನ ಜೋಳ ಸೇರಿದಂತೆ ವಿವಿಧ ಬೆಳೆಗಳ ಬಿತ್ತನೆ ಪೂರ್ಣಗೊಳಿಸಿದ್ದರು. ಆದರೆ ಕಳೆದ ಹಲವು ದಿನಗಳಿಂದ ಮಳೆ ಕಾಣಿಸದ ಕಾರಣ ಮೊಳಕೆ ಒಡೆಯುತ್ತಿರುವ ಬೀಜಗಳಿಗೆ ತೇವಾಂಶದ ಕೊರತೆ ಎದುರಾಗಿದ್ದು, ರೈತರಲ್ಲಿ ಆತಂಕ ಮನೆ ಮಾಡಿದೆ.

ಈ ಹಿನ್ನೆಲೆಯಲ್ಲಿ ಗ್ರಾಮದ ಮಹಿಳೆಯರು ಶತಮಾನಗಳಿಂದ ನಡೆದುಕೊಂಡು ಬಂದಿರುವ ಜನಪದ ಸಂಪ್ರದಾಯದಂತೆ ಗುರ್ಜಿ ಪೂಜೆ ಆಚರಿಸಿದರು. ರೊಟ್ಟಿ ಬೇಯಿಸುವ ಹಂಚಿನ ಮೇಲೆ ಆಕಳ ಸಗಣಿಯಿಂದ ತಯಾರಿಸಿದ ಗುರ್ಜಿ ಮೂರ್ತಿಯನ್ನು ಪ್ರತಿಷ್ಠಾಪಿಸಿ, ಹಸಿರು ಹುಲ್ಲಿನ ಸಸಿಗಳಿಂದ ಅಲಂಕರಿಸಿ ಗ್ರಾಮದ ಓಣಿ-ಓಣಿಗಳಲ್ಲಿ ಸಂಚರಿಸಿದರು.

> "ಗುರ್ಜಿ ಪೂಜೆ ನಮ್ಮ ಸಂಪ್ರದಾಯ ಮಾತ್ರವಲ್ಲ, ರೈತರ ಬದುಕಿನ ಭರವಸೆಯ ಸಂಕೇತ. ಮಳೆರಾಯ ಕೃಪೆ ತೋರಿ ಬೆಳೆ ಉಳಿಸಲಿ ಎಂಬುದೇ ನಮ್ಮ ಪ್ರಾರ್ಥನೆ."
> **– ಶಿವಲೀಲಾ ಪಾಟೀಲ,** ರೈತ ಮಹಿಳೆ

ಮಹಿಳೆಯರು ಜನಪದ ಹಾಡುಗಳನ್ನು ಹಾಡುತ್ತಾ ಪ್ರತಿ ಮನೆಯ ಮುಂದೆ ತೆರಳಿದಾಗ, ಮನೆಯವರು ಗುರ್ಜಿ ಹೊತ್ತ ಮಹಿಳೆಯರ ತಲೆ ಮೇಲೆ ನೀರು ಸುರಿದು ಪೂಜೆ ಸಲ್ಲಿಸಿದರು. ಜೋಳ, ರೊಟ್ಟಿ-ಪಲ್ಲೆ, ಧಾನ್ಯ, ಪುಡಿಗಾಸು ಸೇರಿದಂತೆ ವಿವಿಧ ದವಸಧಾನ್ಯಗಳನ್ನು ಸಮರ್ಪಿಸಿದರು.

ಪೂಜೆಯ ನಂತರ ಸಂಗ್ರಹವಾದ ದವಸಧಾನ್ಯಗಳಿಂದ ಗೋಧಿ ಹುಗ್ಗಿ, ಜೋಳದ ಸಂಗಟಿ ಹಾಗೂ ಸಾರು ತಯಾರಿಸಿ ಹಳ್ಳದ ದಡದಲ್ಲಿ ವಿಶೇಷ ಪೂಜೆ ನೆರವೇರಿಸಲಾಯಿತು. ಬಳಿಕ ಜಂಗಮರಾಧನೆ ಮತ್ತು ಅನ್ನಸಂತರ್ಪಣೆ ನಡೆಯಿತು.

ರೈತ ಮಹಿಳೆಯರಾದ ಮಲ್ಲಮ್ಮ ಬೇಲೇರಿ, ಮಂಜಕ್ಕ ಸೊಬರದ, ಶಿವಲೀಲಾ ಪಾಟೀಲ, ಸಂಗಮ್ಮ ಬಾಗೂರ, ಅಕ್ಕಮ್ಮ ಚನ್ನಪ್ಪಗೌಡ್ರ, ವೀಣಾ ಬೇಲೇರಿ ಹಾಗೂ ಕವಿತಾ ಕಿರಟಗೇರಿ ಮಾತನಾಡಿ, ಇನ್ನೂ ಕೆಲವೇ ದಿನಗಳಲ್ಲಿ ಮಳೆಯಾಗದಿದ್ದರೆ ಬಿತ್ತಿದ ಬೀಜಗಳು ಒಣಗುವ ಭೀತಿ ಇದೆ. ಈಗಾಗಲೇ ಬೀಜ, ಗೊಬ್ಬರ ಮತ್ತು ಉಳುಮೆಗೆ ಹೆಚ್ಚಿನ ವೆಚ್ಚ ಮಾಡಿದ್ದು, ಮಳೆ ಕೈಕೊಟ್ಟರೆ ರೈತರು ಸಂಕಷ್ಟಕ್ಕೆ ಸಿಲುಕಲಿದ್ದಾರೆ ಎಂದು ಆತಂಕ ವ್ಯಕ್ತಪಡಿಸಿದರು.

# ಅಪರಿಚಿತ ವ್ಯಕ್ತಿಯ ಶವ ಪತ್ತೆ

■ ವಿಜಯಸಾಕ್ಷಿ ಸುದ್ದಿ, ಗದಗ

ಮುನಿರಾಬಾದ್ ರೈಲ್ವೆ ನಿಲ್ದಾಣದಲ್ಲಿ ಸುಮಾರು 40ರಿಂದ 45 ವರ್ಷದ ಅಪರಿಚಿತ ವ್ಯಕ್ತಿಯೊಬ್ಬರು ಮೃತಪಟ್ಟ ಸ್ಥಿತಿಯಲ್ಲಿ ಪತ್ತೆಯಾಗಿದ್ದು, ಮೃತನ ವಾರಸುದಾರರ ಪತ್ತೆಗಾಗಿ ಗದಗ ರೈಲ್ವೆ ಪೊಲೀಸರು ಸಾರ್ವಜನಿಕರ ಸಹಕಾರ ಕೋರಿದ್ದಾರೆ.

ಜೂನ್ 16ರಂದು ನಡೆದ ಈ ಘಟನೆಗೆ ಸಂಬಂಧಿಸಿದಂತೆ ಗದಗ ರೈಲ್ವೆ ಪೊಲೀಸ್ ಠಾಣೆಯಲ್ಲಿ ಯುಡಿಆರ್ ಸಂಖ್ಯೆ 23/2026ರಡಿ ಕಲಂ 194 ಬಿಎನ್‌ಎಸ್‌ಎಸ್ ಪ್ರಕಾರ ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಳ್ಳಲಾಗಿದೆ.



ಮೃತನು ಸುಮಾರು 5.5 ಅಡಿ ಎತ್ತರ, ಸಾಧಾರಣ ಮೈಕಟ್ಟು ಹೊಂದಿದ್ದು, ಎಣ್ಣೆಗೆಂಪು ಮೈಬಣ್ಣ, ಕೋಲು ಮುಖ, ಅಗಲವಾದ ಹಣೆ ಹಾಗೂ ಉದ್ದನೆಯ ಮೂಗು ಹೊಂದಿದ್ದಾನೆ. ತಲೆಯಲ್ಲಿ 3ರಿಂದ 4 ಇಂಚು ಉದ್ದದ ಕಪ್ಪು ಹಾಗೂ ಬಿಳಿ ಮಿಶ್ರಿತ ಕೂದಲು ಇದ್ದು, ಅರ್ಧ ಇಂಚು ಉದ್ದದ ಕಪ್ಪು ದಾಡಿ ಮತ್ತು ಮೀಸೆ ಬಿಟ್ಟಿರುತ್ತಾನೆ.

ಮೃತನು ಬಿಳಿ, ನೀಲಿ ಹಾಗೂ ಕೆಂಪು ಮಿಶ್ರಿತ ಚೆಕ್ಸ್ ಶರ್ಟ್, ಕಪ್ಪು ಬಣ್ಣದ ನೈಟ್ ಪ್ಯಾಂಟ್ ಹಾಗೂ ನೀಲಿ-ಕೆಂಪು ಗೆರೆಯುಳ್ಳ ಅಂಡರ್‌ವೇರ್ ಧರಿಸಿದ್ದಾನೆ.

ಬಲಗೈಯಲ್ಲಿ ಸ್ಟೀಲ್ ಕೈಗಡಗ (ಬ್ರೇಸ್‌ಲೆಟ್) ಧರಿಸಿದ್ದಾನೆ.

ಮೃತನ ಗುರುತು ಅಥವಾ ವಾರಸುದಾರರ ಬಗ್ಗೆ ಮಾಹಿತಿ ಇರುವವರು ಗದಗ ರೈಲ್ವೆ ಪೊಲೀಸ್ ಠಾಣೆ ದೂರವಾಣಿ ಸಂಖ್ಯೆ 08372-278744, ಮೊಬೈಲ್ ಸಂಖ್ಯೆ 9480802128 ಅಥವಾ ರೈಲ್ವೆ ಪೊಲೀಸ್ ಕಂಟ್ರೋಲ್ ರೂಂ 080-22871291 ಸಂಪರ್ಕಿಸುವಂತೆ ಪೊಲೀಸರು ಮನವಿ ಮಾಡಿದ್ದಾರೆ.

**ಎಸ್‌ಎಸ್‌ಎಲ್‌ಸಿ, ಪಿಯುಸಿ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ; ಶಾಲಾ ಮಕ್ಕಳಿಗೆ ನೋಟ್‌ಬುಕ್ ವಿತರಣೆ**

## ಜೂ.28ರಂದು ಮರಾಠಾ ಸಮಾಜದ ಪ್ರತಿಭಾವಂತರಿಗೆ ಸನ್ಮಾನ

■ವಿಜಯಸಾಕ್ಷಿ ಸುದ್ದಿ, ಗದಗ

ಮರಾಠಾ ವಿದ್ಯಾವರ್ಧಕ ಸಂಘ (ರಿ), ಗದಗ-ಬೆಟಗೇರಿ ವತಿಯಿಂದ 2025-26ನೇ ಶೈಕ್ಷಣಿಕ ಸಾಲಿನಲ್ಲಿ ಎಸ್‌ಎಸ್‌ಎಲ್‌ಸಿ ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಅತ್ಯುತ್ತಮ ಸಾಧನೆ ಮಾಡಿದ ಮರಾಠಾ ಸಮಾಜದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಲು ನಿರ್ಧರಿಸಲಾಗಿದೆ.

ಸಂಘದ ಕಾರ್ಯಾಲಯದಲ್ಲಿ ಅಧ್ಯಕ್ಷ ಅರುಣಕುಮಾರ ಬಿ. ಚವ್ಹಾಣ ಅವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಈ ತೀರ್ಮಾನ ಕೈಗೊಳ್ಳಲಾಯಿತು. ಪ್ರತಿಭಾ ಪುರಸ್ಕಾರ ಹಾಗೂ 5ನೇ ತರಗತಿಯಿಂದ 10ನೇ ತರಗತಿವರೆಗೆ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ನೋಟ್‌ಬುಕ್ ವಿತರಣೆ ಕಾರ್ಯಕ್ರಮವು ಜೂನ್ 28ರಂದು ಬೆಳಿಗ್ಗೆ 11.30ಕ್ಕೆ ನಡೆಯಲಿದೆ.

ಪ್ರತಿಭಾ ಪುರಸ್ಕಾರ ಪಡೆಯಲು ಎಸ್‌ಎಸ್‌ಎಲ್‌ಸಿ ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳು ತಮ್ಮ ಅಂಕಪಟ್ಟಿ ಹಾಗೂ ಪಾಸ್‌ಪೋರ್ಟ್ ಗಾತ್ರದ ಭಾವಚಿತ್ರವನ್ನು ಸಲ್ಲಿಸಬೇಕು. 5ರಿಂದ 10ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಶಾಲೆಯ ಮುಖ್ಯೋಪಾಧ್ಯಾಯರ ಸಹಿಯುಳ್ಳ ಅರ್ಜಿಯೊಂದಿಗೆ ಭಾವಚಿತ್ರವನ್ನು ಜೂನ್ 25ರೊಳಗಾಗಿ ಸಂಘದ ಕಾರ್ಯಾಲಯಕ್ಕೆ ಸಲ್ಲಿಸುವಂತೆ ಸೂಚಿಸಲಾಗಿದೆ.

ಅರ್ಜಿಗಳು ಸಂಘದ ಕಾರ್ಯಾಲಯದಲ್ಲಿ ಲಭ್ಯವಿದ್ದು, ಪ್ರತಿದಿನ ಸಂಜೆ 5ರಿಂದ 7 ಗಂಟೆಯವರೆಗೆ ಪಡೆದು ಸಲ್ಲಿಸಬಹುದಾಗಿದೆ.

ಮರಾಠಾ ಸಮಾಜದ ವಿದ್ಯಾರ್ಥಿಗಳು, ಪಾಲಕರು ಹಾಗೂ ಸಮಾಜದ ಮುಖಂಡರು ಕಾರ್ಯಕ್ರಮದಲ್ಲಿ ಭಾಗವಹಿಸಿ ಯಶಸ್ವಿಗೊಳಿಸುವಂತೆ ಸಂಘದ ಕಾರ್ಯದರ್ಶಿ ಸುರೇಶ ಎಸ್. ಬೇಂದ್ರೆ ಮನವಿ ಮಾಡಿದ್ದಾರೆ.

**ತಪ್ಪು ಮಾಹಿತಿ ನೀಡಿದರೆ ಅಧಿಕಾರಿಗಳ ವಿರುದ್ಧ ಕ್ರಮ: ಜಿಲ್ಲಾಧಿಕಾರಿ ಶ್ರೀಧರ್**

# ಬೆಳೆ ಅಂಕಿ-ಅಂಶಗಳಲ್ಲಿ ಗೊಂದಲಕ್ಕೆ ಅವಕಾಶವಿಲ್ಲ

■ವಿಜಯಸಾಕ್ಷಿ ಸುದ್ದಿ, ಗದಗ

ಕೃಷಿ, ತೋಟಗಾರಿಕೆ ಹಾಗೂ ರೇಷ್ಮೆ ಬೆಳೆಗಳಿಗೆ ಸಂಬಂಧಿಸಿದ ಅಂಕಿ-ಅಂಶಗಳು ಮತ್ತು ಬೆಳೆ ವಿಸ್ತೀರ್ಣದ ಮಾಹಿತಿ ನಿಖರವಾಗಿರಬೇಕು. ತಪ್ಪು ಮಾಹಿತಿ ದಾಖಲಾದರೆ ರೈತರಿಗೆ ಬೆಳೆ ವಿಮೆ ಹಾಗೂ ಸರ್ಕಾರಿ ಸೌಲಭ್ಯಗಳ ವಿತರಣೆಯಲ್ಲಿ ತೊಂದರೆ ಉಂಟಾಗುತ್ತದೆ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ನಡೆದ ಕೃಷಿ ಅಂಕಿ-ಅಂಶಗಳ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಹಂಗಾಮಿನ ಆರಂಭದಿಂದ ಅಂತ್ಯದವರೆಗೆ ಕೃಷಿ ಮತ್ತು ತೋಟಗಾರಿಕೆ ಇಲಾಖೆಗಳ ಅಂಕಿ-ಅಂಶಗಳಲ್ಲಿ ಯಾವುದೇ ವ್ಯತ್ಯಾಸ ಅಥವಾ ಗೊಂದಲ ಇರಬಾರದು. ಕಂದಾಯ ಸೇರಿದಂತೆ ಎಲ್ಲ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಿ ಬೆಳೆ ಸಮೀಕ್ಷೆ ಮತ್ತು ಅಂಕಿ-ಅಂಶಗಳ ಸಂಗ್ರಹಣೆಯನ್ನು ನಿಖರವಾಗಿ ನಡೆಸಬೇಕು ಎಂದು ಸೂಚಿಸಿದರು.

ಖಾಸಗಿ ಜಂಟಿ ಸಮೀಕ್ಷೆದಾರರು ಹಾಗೂ ಗ್ರಾಮ ಆಡಳಿತ ಅಧಿಕಾರಿಗಳು ಸಲ್ಲಿಸುವ ಬೆಳೆ ಸಮೀಕ್ಷೆ ವರದಿಗಳನ್ನು ಮೇಲ್ವಿಚಾರಕರು ಕಡ್ಡಾಯವಾಗಿ ಕ್ಷೇತ್ರ ಮಟ್ಟದಲ್ಲಿ ಪರಿಶೀಲಿಸಬೇಕು. ಈ ಜವಾಬ್ದಾರಿಯಲ್ಲಿ ನಿರ್ಲಕ್ಷ್ಯ ತೋರಿದರೆ



ಅಧಿಕಾರಿಗಳೇ ಹೊಣೆಗಾರರಾಗಬೇಕಾಗುತ್ತದೆ ಎಂದು ಎಚ್ಚರಿಸಿದರು.

**ಬೆಳೆ ವಿಮೆಗೆ ನಿಖರ ಮಾಹಿತಿ ಅಗತ್ಯ**

ಕ್ರಾಪ್ ಕಟಿಂಗ್ ಪ್ರಯೋಗಗಳು ಹಾಗೂ ಬೆಳೆ ಸಮೀಕ್ಷೆಗಳಲ್ಲಿ ತಪ್ಪು ಮಾಹಿತಿ ದಾಖಲಾಗಿದರೆ ರೈತರಿಗೆ ಬೆಳೆ ವಿಮೆ ಪಡೆಯುವ ಸಂದರ್ಭದಲ್ಲಿ ತೊಂದರೆ ಉಂಟಾಗುತ್ತದೆ. ವಿಮಾ ಕಂಪನಿಗಳು ಆಕ್ಷೇಪಣೆ ಎತ್ತಲು ಅವಕಾಶ ನೀಡದಂತೆ ಅಧಿಕಾರಿಗಳು ಎಚ್ಚರಿಕೆಯಿಂದ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಜಿಲ್ಲೆಯಲ್ಲಿ ಜೋಳದಂತಹ ಸಾಂಪ್ರದಾಯಿಕ ಬೆಳೆಗಳ ವಿಸ್ತೀರ್ಣ ಕಡಿಮೆಯಾಗುತ್ತಿರುವ ಕುರಿತು ಕಳವಳ ವ್ಯಕ್ತಪಡಿಸಿದ ಅವರು, ರೈತರಿಗೆ ಆರ್ಥಿಕ ಲಾಭದಾಯಕ ಬೆಳೆಗಳ ಕುರಿತು

> "ಬೆಳೆ ಸಮೀಕ್ಷೆ ಹಾಗೂ ಕೃಷಿ ಅಂಕಿ-ಅಂಶಗಳಲ್ಲಿ ತಪ್ಪು ಮಾಹಿತಿ ದಾಖಲಾಗಿದರೆ ರೈತರಿಗೆ ಬೆಳೆ ವಿಮೆ ಮತ್ತು ಸರ್ಕಾರಿ ಸೌಲಭ್ಯಗಳ ವಿತರಣೆಯಲ್ಲಿ ತೊಂದರೆ ಉಂಟಾಗುತ್ತದೆ. ಹೀಗಾಗಿ ಅಂಕಿ-ಅಂಶಗಳ ನಿಖರತೆಗೆ ಎಲ್ಲ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು."
> – ಸಿ.ಎನ್. ಶ್ರೀಧರ್, ಜಿಲ್ಲಾಧಿಕಾರಿ

ಮಾಹಿತಿ ನೀಡುವ ಜೊತೆಗೆ ಬೆಳೆ ವೈವಿಧ್ಯತೆ ಮತ್ತು ಮಿಶ್ರ ಬೆಳೆ ಪದ್ಧತಿ ಅಳವಡಿಸಿಕೊಳ್ಳಲು ಪ್ರೋತ್ಸಾಹಿಸಬೇಕು ಎಂದರು.

**ಪಾಳು ಭೂಮಿ ಕೃಷಿಗೆ ಬಳಕೆ ಮಾಡುವಂತೆ ಸೂಚನೆ**

ಜಿಲ್ಲೆಯಲ್ಲಿ ರೇಷ್ಮೆ ಕೃಷಿ ಹಾಗೂ ತೋಟಗಾರಿಕಾ ಬೆಳೆಗಳಿಗೆ ಉತ್ತಮ ಅವಕಾಶಗಳಿದ್ದು, ಪಾಳು ಭೂಮಿಯನ್ನು ಗುರುತಿಸಿ ಕೃಷಿಯೋಗ್ಯ ಭೂಮಿಯನ್ನಾಗಿ ಪರಿವರ್ತಿಸಲು ರೈತರಲ್ಲಿ ಜಾಗೃತಿ ಮೂಡಿಸಬೇಕು ಎಂದು ಕೃಷಿ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಬಿತ್ತನೆ ಕಾರ್ಯ ಪೂರ್ಣಗೊಂಡ ತಕ್ಷಣವೇ ಪೋರ್ಟಲ್‌ನಲ್ಲಿ ನಿಖರ ಮಾಹಿತಿಯನ್ನು ದಾಖಲಿಸಬೇಕು. ಯಾವುದೇ ಹಂತದಲ್ಲಿ ನಿರ್ಲಕ್ಷ್ಯ ತೋರಿದರೆ ಶಿಸ್ತು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದರು.

**5.85 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ**

ಸಭೆಯಲ್ಲಿ ಜಿಲ್ಲಾ ಸಾಂಖ್ಯಿಕ ಸಂಗ್ರಹಣಾಧಿಕಾರಿ ಬಿ.ಎಸ್. ಪಾಟೀಲ ಜಿಲ್ಲೆಯ ಕೃಷಿ ಅಂಕಿ-ಅಂಶಗಳ ವರದಿ ಮಂಡಿಸಿದರು.

2025-26ನೇ ಸಾಲಿನಲ್ಲಿ ಜಿಲ್ಲೆಯಲ್ಲಿ ಒಟ್ಟು 5,85,777 ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆಯಾಗಿದ್ದು, ಅದರಲ್ಲಿ 1,18,191 ಹೆಕ್ಟೇರ್ ಪ್ರದೇಶ ನೀರಾವರಿ ವ್ಯಾಪ್ತಿಗೆ ಒಳಪಟ್ಟಿದೆ ಎಂದು ಮಾಹಿತಿ ನೀಡಿದರು.

ಮುಂಗಾರು ಹಂಗಾಮಿನಲ್ಲಿ ಮೆಕ್ಕೆಜೋಳ 1,54,216 ಹೆಕ್ಟೇರ್ ಪ್ರದೇಶದಲ್ಲಿ ಬೆಳೆಯಲ್ಪಟ್ಟ ಪ್ರಮುಖ ಬೆಳೆಯಾಗಿದ್ದರೆ, ಹೆಸರು 1,06,145 ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆಯಾಗಿದೆ.

ಹಿಂಗಾರು ಹಂಗಾಮಿನಲ್ಲಿ ಕಡಲೆ 1,57,903 ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆಯಾಗುವ ಮೂಲಕ ಪ್ರಮುಖ ಬೆಳೆಯಾಗಿ ಹೊರಹೊಮ್ಮಿದೆ. ಜೋಳ, ಗೋಧಿ ಹಾಗೂ ಸೂರ್ಯಕಾಂತಿಯೂ ಗಣನೀಯ ಪ್ರಮಾಣದಲ್ಲಿ ಬೆಳೆಯಲಾಗಿದೆ ಎಂದು ವಿವರಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್., ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಎ.ಎ. ಕಂಬಾಳಿಮಠ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸನಗೌಡ ಕೊಟೂರ, ಭೂದಾಖಲೆಗಳ ಉಪನಿರ್ದೇಶಕ ರುದ್ರಣ್ಣಗೌಡ ಜಿ.ಜೆ. ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

**ಯುವ ಪೀಳಿಗೆಗೆ ಆಧ್ಯಾತ್ಮಿಕ ಶಿಕ್ಷಣವೇ ದಾರಿದೀಪ: ರಾಜಯೋಗಿನಿ ಬಿ.ಕೆ. ಜಯಂತಿ**

## ಆತ್ಮದರ್ಶನದಿಂದ ಜೀವನಕ್ಕೆ ಸನ್ಮಾರ್ಗ



■ವಿಜಯಸಾಕ್ಷಿ ಸುದ್ದಿ, ಗದಗ

ಯುವ ಪೀಳಿಗೆಯನ್ನು ಮೌಲ್ಯಾಧಾರಿತ ಹಾಗೂ ಸದಾಚಾರದ ಜೀವನದತ್ತ ಕೊಂಡೊಯ್ಯಲು ಆಧ್ಯಾತ್ಮಿಕ ಶಿಕ್ಷಣ ಅತ್ಯಗತ್ಯ ಎಂದು ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದ ಮುಖ್ಯ ಸಂಚಾಲಕಿ ರಾಜಯೋಗಿನಿ ಬ್ರಹ್ಮಕುಮಾರಿ ಜಯಂತಿ ಹೇಳಿದರು.

ನಗರದ ವಿವೇಕಾನಂದ ನಗರದ ಸ್ವಾಮಿ ವಿವೇಕಾನಂದ ಸಾಂಸ್ಕೃತಿಕ ಭವನದಲ್ಲಿ ನಡೆದ 59ನೇ ಮಾಸಿಕ 'ಜೀವನ ದರ್ಶನ' ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಜೀವನದ ನಿಜವಾದ ಅರ್ಥವನ್ನು ಅರಿತುಕೊಳ್ಳಲು ಆತ್ಮದರ್ಶನ ಅಗತ್ಯವಾಗಿದ್ದು, ಪ್ರತಿಯೊಬ್ಬರೂ ಪ್ರತಿದಿನ ಧ್ಯಾನದ ಮೂಲಕ ಆತ್ಮಸ್ವರೂಪದ ಅರಿವು ಪಡೆದು ಜೀವನವನ್ನು ಸನ್ಮಾರ್ಗದಲ್ಲಿ ಮುನ್ನಡೆಸಬೇಕು ಎಂದು ಹೇಳಿದರು. ಸಮಾಜದ ಸರ್ವತೋಮುಖ ಅಭಿವೃದ್ಧಿ ಹಾಗೂ ಯುವಜನರ ವ್ಯಕ್ತಿತ್ವ ವಿಕಸನಕ್ಕೆ ಆಧ್ಯಾತ್ಮಿಕ ಶಿಕ್ಷಣದ ಕೊಡುಗೆ ಅಪಾರವಾಗಿದೆ ಎಂದು ತಿಳಿಸಿದರು.

ವೇದ, ಉಪನಿಷತ್ತು, ದಾಸ ಸಾಹಿತ್ಯ ಹಾಗೂ ಯೋಗ ಸಾಹಿತ್ಯದಂತಹ ನಮ್ಮ ಪರಂಪರೆಯ ಜ್ಞಾನ ಸಂಪತ್ತನ್ನು ಸಮಾಜಕ್ಕೆ

> "ದಿನದ 24 ಗಂಟೆಗಳಲ್ಲಿ ಒಂದು ಗಂಟೆಯಾದರೂ ಆತ್ಮದರ್ಶನ ಮತ್ತು ಧ್ಯಾನಕ್ಕೆ ಮೀಸಲಿಟ್ಟರೆ ಜೀವನದಲ್ಲಿ ಶಾಂತಿ, ಸಂತೃಪ್ತಿ ಮತ್ತು ಸಕಾರಾತ್ಮಕ ಪರಿವರ್ತನೆ ಸಾಧ್ಯವಾಗುತ್ತದೆ."
> – ರಾಜಯೋಗಿನಿ ಬ್ರಹ್ಮಕುಮಾರಿ ಜಯಂತಿ

ತಲುಪಿಸುವುದು ಸಂಸ್ಥೆಯ ಪ್ರಮುಖ ಉದ್ದೇಶವಾಗಿದೆ ಎಂದರು.

ಇಂದಿನ ಜೀವನಶೈಲಿಯಲ್ಲಿ ಒತ್ತಡ ಮತ್ತು ಗೊಂದಲಗಳ ನಡುವೆ ಕುಟುಂಬಗಳು ನೆಮ್ಮದಿ ಕಳೆದುಕೊಳ್ಳುತ್ತಿವೆ. ಆಧ್ಯಾತ್ಮಿಕತೆಯ ಮೂಲಕ ಮನಸ್ಸಿಗೆ ಶಾಂತಿ ದೊರೆಯುವುದರ ಜೊತೆಗೆ ಜೀವನದಲ್ಲಿ ದೈವೀ ಗುಣಗಳ ಬೆಳವಣಿಗೆ ಸಾಧ್ಯವಾಗುತ್ತದೆ ಎಂದು ಜಯಂತಿ ಹೇಳಿದರು.

ಹಿರಿಯರ ಅನುಭವ ಹಾಗೂ ಮಾರ್ಗದರ್ಶನ ಯುವ ಪೀಳಿಗೆಯ ಬದುಕಿಗೆ ದಿಕ್ಕು ತೋರಬಲ್ಲದು. ಸಮಾಜದಲ್ಲಿ ಸಕಾರಾತ್ಮಕ ಬದಲಾವಣೆ ತರಲು ಹಿರಿಯರು ಯುವಕರಿಗೆ ದಾರಿದೀಪವಾಗಬೇಕು ಎಂದು ಅವರು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಪರಿಸರ ಸಂರಕ್ಷಣೆ ಕುರಿತು ಉಪನ್ಯಾಸ ನೀಡಿದ ತೋಟಗಾರಿಕೆ ಇಲಾಖೆಯ ನಿವೃತ್ತ ಹಿರಿಯ ಸಹಾಯಕ ನಿರ್ದೇಶಕ ಸುರೇಶ ಕುಂಬಾರ, ಪರಿಸರ ಸಂರಕ್ಷಣೆ ಒಂದು ದಿನದ ಆಚರಣೆಗೆ ಸೀಮಿತವಾಗದೆ ನಿರಂತರ ಚಟುವಟಿಕೆಯಾಗಬೇಕು ಎಂದು ಹೇಳಿದರು.

ಮನೆ ಹಾಗೂ ಕಚೇರಿ ಆವರಣದಲ್ಲಿ ಗಿಡಗಳನ್ನು ಬೆಳೆಸುವುದು, ಬಡಾವಣೆ ಹಾಗೂ ಗ್ರಾಮಗಳಲ್ಲಿ ಉದ್ಯಾನವನಗಳ ನಿರ್ಮಾಣ ಮತ್ತು ಅವುಗಳ ಪೋಷಣೆಯಲ್ಲಿ ಸಾರ್ವಜನಿಕರು ಪಾಲ್ಗೊಳ್ಳಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸ್ವಾಮಿ ವಿವೇಕಾನಂದ ಸಾಂಸ್ಕೃತಿಕ ಸಮಿತಿಯ ಅಧ್ಯಕ್ಷ ಎ.ಟಿ. ನರೇಲ್ಲ ಮಾತನಾಡಿ, ಒತ್ತಡದ ಬದುಕಿನಲ್ಲಿ ಮಾನಸಿಕ ನೆಮ್ಮದಿ ಹಾಗೂ ಮೌಲ್ಯಾಧಾರಿತ ಜೀವನಕ್ಕೆ ಇಂತಹ ಧಾರ್ಮಿಕ ಮತ್ತು ಆಧ್ಯಾತ್ಮಿಕ ಕಾರ್ಯಕ್ರಮಗಳು ಅಗತ್ಯವಾಗಿವೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಬಿ.ಎನ್. ಯರನಾಳ, ಡಾ. ಮಲ್ಲಿಕಾರ್ಜುನ ಉಪ್ಪಿನ, ಎಸ್.ಎಸ್. ಪಾಣಿಶೆಟ್ಟರ, ಜಿ.ಬಿ. ಅಬ್ಬಿಗೇರಿ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಕಾರ್ಯಕ್ರಮಕ್ಕೂ ಮುನ್ನ ಕಾಶೀ ವಿಶ್ವನಾಥನ ಪಾಲಕಿ ಸೇವೆ ಭಕ್ತಿಭಾವದಿಂದ ಜರುಗಿತು.



ಗದಗ: ಬೆಟಗೇರಿ ನಗರದ ಶ್ರೀ ಮಹಾರಾಣಾ ಪ್ರತಾಪಸಿಂಹ ಸಂಯುಕ್ತ ಪದವಿ ಪೂರ್ವ ಮಹಾವಿದ್ಯಾಲಯದಲ್ಲಿ ರಾಷ್ಟ್ರವೀರ ಪುರುಷ ಮಹಾರಾಣಾ ಪ್ರತಾಪಸಿಂಹ ಅವರ 486ನೇ ಜಯಂತಿಯನ್ನು ಭಕ್ತಿಪೂರ್ವಕವಾಗಿ ಆಚರಿಸಲಾಯಿತು. ಕಾರ್ಯಕ್ರಮದಲ್ಲಿ ಶಿಕ್ಷಣ ಸಂಸ್ಥೆಯ ಸಂಸ್ಥಾಪಕರಾದ ಗಣೇಶಸಿಂಗ್ ಬ್ಯಾಳಿ ಅವರು ಮಹಾರಾಣಾ ಪ್ರತಾಪಸಿಂಹ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಪುಷ್ಪಾರ್ಚನೆ ಮಾಡುವ ಮೂಲಕ ಗೌರವ ನಮನ ಸಲ್ಲಿಸಿದರು. ಈ ಸಂದರ್ಭದಲ್ಲಿ ಮಹಾರಾಣಾ ಪ್ರತಾಪಸಿಂಹ ಅವರ ಶೌರ್ಯ, ದೇಶಪ್ರೇಮ ಹಾಗೂ ಸ್ವಾಭಿಮಾನದ ಜೀವನ ಮೌಲ್ಯಗಳನ್ನು ಸ್ಮರಿಸಲಾಯಿತು.

ಕಾರ್ಯಕ್ರಮದಲ್ಲಿ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯ ಎಸ್.ಎಂ. ಉಳ್ಳಾಗಡ್ಡಿ, ಪ್ರೌಢಶಾಲಾ ವಿಭಾಗದ ಮುಖ್ಯೋಪಾಧ್ಯಾಯ ಎಸ್.ಎಸ್. ಬಡಿಗೇರ, ಶಿಕ್ಷಣ ಸಂಸ್ಥೆಯ ಸಿಬ್ಬಂದಿ ವರ್ಗ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

**ಪುರಸಭೆ ಎದುರು ಅಹೋರಾತ್ರಿ ಸತ್ಯಾಗ್ರಹ- ಮೂಲಸೌಕರ್ಯ ಕಲ್ಪಿಸಲು ಆಗ್ರಹ**

# ನೀರು-ನೈರ್ಮಲ್ಯ ಸಮಸ್ಯೆಗೆ ಕಿಡಿಕಾರಿದ ಜನರು

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ವಾರ್ಡ್ ನಂ. 3ರಲ್ಲಿ ಉಂಟಾಗಿರುವ ಕುಡಿಯುವ ನೀರಿನ ಕೊರತೆ, ಕಾಲುವೆ ಸ್ವಚ್ಛತೆ, ಬೀದಿದೀಪಗಳ ನಿರ್ವಹಣೆ, ಸಾರ್ವಜನಿಕ ಶೌಚಾಲಯ ಸೇರಿದಂತೆ ವಿವಿಧ ಮೂಲಭೂತ ಸೌಲಭ್ಯಗಳ ಸಮಸ್ಯೆಗಳನ್ನು ತಕ್ಷಣ ಪರಿಹರಿಸುವಂತೆ ಆಗ್ರಹಿಸಿ ಸಾರ್ವಜನಿಕರು ಹಾಗೂ ಸಮಗ್ರ ರೈತಪರ ಹೋರಾಟ ಸಮಿತಿ ಸದಸ್ಯರು ಬುಧವಾರ ಪುರಸಭೆ ಎದುರು ಪ್ರತಿಭಟನೆ ನಡೆಸಿದರು.

ಪ್ರತಿಭಟನೆಗೆ ಕುಂದಗೋಳ ಅಭಿನವ ಬಸವಣ್ಣ ಶ್ರೀಗಳು ಹಾಗೂ ದುಮ್ಮವಾಡ ಸರ್ಪಭೂಷಣ ಶ್ರೀಗಳು ಬೆಂಬಲ ಸೂಚಿಸಿದರು.

ಕೆಂಚಲಾಪುರ ಓಣಿಯಿಂದ ಎತ್ತು, ಆಕಳು, ಕೊಡಪಾನ, ಚರಗಿ ಹಾಗೂ ಪೊರಕೆಗಳೊಂದಿಗೆ ವಾದ್ಯಮೇಳದ ಮೂಲಕ ಮೆರವಣಿಗೆ ನಡೆಸಿದ ಪ್ರತಿಭಟನಾಕಾರರು, ಮುಖ್ಯ ಬಜಾರ್ ರಸ್ತೆಯ ಮೂಲಕ ಪುರಸಭೆ ಕಚೇರಿಗೆ ಆಗಮಿಸಿ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಪ್ರತಿಭಟನಾ ಸಭೆಯಲ್ಲಿ



ಮಾತನಾಡಿದ ಸಮಗ್ರ ರೈತಪರ ಹೋರಾಟ ವೇದಿಕೆಯ ತಾಲೂಕು ಅಧ್ಯಕ್ಷ ಮಂಜುನಾಥ ಮಾಗಡಿ, ಪಟ್ಟಣಕ್ಕೆ ತಿಂಗಳಿಗೊಮ್ಮೆ ಮಾತ್ರ ನೀರು ಸರಬರಾಜಾಗುತ್ತಿದೆ. ನದಿ ನೀರಿನ ಪೈಪ್‌ಲೈನ್ ದುರಸ್ತಿ ಹಾಗೂ ವಿದ್ಯುತ್ ವ್ಯತ್ಯಯದ ನೆಪ ಹೇಳಲಾಗುತ್ತಿದೆ. ನೂರಾರು ಕೊಳವೆಬಾವಿಗಳ ನಿರ್ವಹಣೆ ಹಾಗೂ ಪಂಪ್‌ಸೆಟ್‌ಗಳ ದುರಸ್ತಿಗೆ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಹಳ್ಳದಕೇರಿ ಪ್ರದೇಶದಲ್ಲಿ ಬಹುತೇಕ ರೈತ ಕುಟುಂಬಗಳು ವಾಸವಾಗಿದ್ದು, ಕುಡಿಯುವ ನೀರು ಹಾಗೂ ಸ್ವಚ್ಛತೆಯ ಕೊರತೆಯಿಂದ ಸಂಕಷ್ಟ ಎದುರಿಸುತ್ತಿವೆ. ಅನೇಕ ಬಾರಿ ಮನವಿ ಸಲ್ಲಿಸಿದರೂ ಸ್ಪಂದನೆ ಸಿಗದ ಕಾರಣ ಪ್ರತಿಭಟನೆ ಅನಿವಾರ್ಯವಾಗಿದೆ ಎಂದು ಹೇಳಿದರು.

ಜೋನ್ ಹಳ್ಳದಿಂದ ಲಂಡಿ ಹಳ್ಳದವರೆಗೆ ಗಿಡಗಂಟಿಗಳು ಬೆಳೆದು ಕೆಸರು ತುಂಬಿಕೊಂಡಿದ್ದು, ಸಾರ್ವಜನಿಕರು ಹಾಗೂ ಜಾನುವಾರುಗಳಿಗೆ ತೊಂದರೆಯಾಗುತ್ತಿದೆ. ಬೀದಿದೀಪ, ಸಾರ್ವಜನಿಕ ನಳ, ಶೌಚಾಲಯ ಹಾಗೂ ಹಳ್ಳಕ್ಕೆ ಕಲ್ವರ್ಟ್ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಬೇಕು ಎಂದು ಪ್ರತಿಭಟನಾಕಾರರು ಒತ್ತಾಯಿಸಿದರು.

> "ಹೋರಾಟ ಮಾಡುತ್ತೇವೆ ಎಂದು ತಿಳಿದ ಕೂಡಲೇ ಅಧಿಕಾರಿಗಳು ಸ್ವಚ್ಛತೆ, ನೀರು ಹಾಗೂ ಬೆಳಕಿನ ವ್ಯವಸ್ಥೆಗೆ ಮುಂದಾಗಿದ್ದಾರೆ. ಜನರ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಸಿಗಬೇಕು."
> – ಮಂಜುನಾಥ ಮಾಗಡಿ, ತಾಲೂಕು ಅಧ್ಯಕ್ಷ, ಸಮಗ್ರ ರೈತಪರ ಹೋರಾಟ ವೇದಿಕೆ

ನಾಗರಾಜ ಚಿಂಚಲಿ ಮಾತನಾಡಿ, ಪಟ್ಟಣದಲ್ಲಿ ನೀರು, ರಸ್ತೆ, ಆಶ್ರಯ ನಿವೇಶನ ಹಾಗೂ ಸ್ವಚ್ಛತೆಯ ಸಮಸ್ಯೆಗಳು ವರ್ಷಗಳಿಂದ ಮುಂದುವರಿದಿವೆ. ಜನಪ್ರತಿನಿಧಿಗಳು ಸಾಮಾಜಿಕ ಜಾಲತಾಣಗಳ ಪ್ರಚಾರಕ್ಕಿಂತ ಜನರ ಸಮಸ್ಯೆಗಳತ್ತ ಗಮನ ಹರಿಸಬೇಕು ಎಂದು ಹೇಳಿದರು.

ಸಂಜೆ ಪ್ರತಿಭಟನಾ ಸ್ಥಳಕ್ಕೆ ಆಗಮಿಸಿದ ಜಿಲ್ಲಾ ಯೋಜನಾ ನಿರ್ದೇಶಕ ಬಸನಗೌಡ ಕೊಟೂರ ಮನವಿ ಸ್ವೀಕರಿಸಿ ಮಾತನಾಡಿ, ನಾಲ್ಕೈದು ದಿನಗಳಲ್ಲಿ ಹೊಸ ಬೋರ್‌ವೆಲ್ ಕೊರೆಸಲು ಕ್ರಮ ಕೈಗೊಳ್ಳಲಾಗುವುದು. ಸಾರ್ವಜನಿಕ ನಳ, ಶೌಚಾಲಯ ಹಾಗೂ ಇತರ ಮೂಲಭೂತ ಸೌಲಭ್ಯಗಳ ಕಲ್ಪನೆಗೂ ಆದ್ಯತೆ ನೀಡಲಾಗುವುದು ಎಂದು ಭರವಸೆ ನೀಡಿದರು.

ಅಧಿಕಾರಿಗಳು ಸಾರ್ವಜನಿಕರೊಂದಿಗೆ ಸೌಜನ್ಯದಿಂದ ವರ್ತಿಸಬೇಕು. ನಿರ್ಲಕ್ಷ್ಯ ಕಂಡುಬಂದರೆ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದರು.

ಪ್ರತಿಭಟನೆಯಲ್ಲಿ ಟಾಕಪ್ಪ ಸಾತಪುತೆ, ಮಲ್ಲಪ್ಪ ಅಂಕಲಿ, ದುಂಡಪ್ಪ ಕೋಟಗಿ, ಹೊನ್ನಪ್ಪ ವಡ್ಡರ, ಶಿವಣ್ಣ ಕಟಗಿ, ಪ್ರಕಾಶ ಗುತ್ತಲ ಸೇರಿದಂತೆ ಅನೇಕರು ಭಾಗವಹಿಸಿದ್ದರು. ಸಿಪಿಐ ಬಿ.ವಿ. ನ್ಯಾಮಗೌಡ್ರ, ಪಿಎಸ್‌ಐ ನಾಗರಾಜ ಗಡಾದ ಹಾಗೂ ಟಿ.ಕೆ. ರಾಠೋಡ ಭದ್ರತಾ ವ್ಯವಸ್ಥೆ ನಿರ್ವಹಿಸಿದರು.

## ಸಮುದಾಯ ಭವನಕ್ಕೆ ಬಾಡಿಗೆ ದರ ನಿಗದಿ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ನರಗುಂದ ಪಟ್ಟಣದಲ್ಲಿ ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿಯಿಂದ ನಿರ್ಮಿಸಲಾದ ಕಾರ್ಮಿಕ ಸಮುದಾಯ ಭವನದ ಬಾಡಿಗೆ ದರವನ್ನು ಕಾರ್ಮಿಕ ಸಚಿವರು ಹಾಗೂ ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿಯ ಅಧ್ಯಕ್ಷರ ಅನುಮೋದನೆಯೊಂದಿಗೆ ನಿಗದಿಪಡಿಸಲಾಗಿದೆ.

ಸರಕು ಮತ್ತು ಸೇವಾ ತೆರಿಗೆ (ಜಿಎಸ್‌ಟಿ), ವಿದ್ಯುತ್ ಹಾಗೂ ನೀರಿನ ಶುಲ್ಕ ಸೇರಿದಂತೆ ಒಟ್ಟು ಬಾಡಿಗೆ ದರವನ್ನು ಮಂಡಳಿಗೆ ವಂತಿಗೆ ಪಾವತಿಸಿರುವ ಸಂಘಟಿತ ಕಾರ್ಮಿಕರಿಗೆ 15,440 ರೂ., ಸಾರ್ವಜನಿಕರಿಗೆ 20,160 ರೂ. ಹಾಗೂ ಸರ್ಕಾರದ ವಿವಿಧ ಇಲಾಖೆಗಳ ತರಬೇತಿ ಮತ್ತು ಕಾರ್ಯಕ್ರಮಗಳಿಗೆ 15,440 ರೂ. ಎಂದು ನಿಗದಿಪಡಿಸಲಾಗಿದೆ.

ಇದರೊಂದಿಗೆ 2,000 ರೂ. ಭದ್ರತಾ ಠೇವಣಿ ನಿಗದಿಪಡಿಸಲಾಗಿದೆ.

ಮಂಡಳಿಗೆ ವಂತಿಗೆ ಪಾವತಿಸಿರುವ ಸಂಘಟಿತ ಕಾರ್ಮಿಕರು ವಾರ್ಷಿಕ ವಂತಿಗೆ ಪಾವತಿಯ ದಾಖಲೆ ಸಲ್ಲಿಸಿದಲ್ಲಿ ಅವರಿಗೆ ರಿಯಾಯಿತಿ ದರದಲ್ಲಿ ಸಮುದಾಯ ಭವನವನ್ನು ಬಾಡಿಗೆಗೆ ನೀಡಲಾಗುವುದು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಕಾರ್ಮಿಕ ನಿರೀಕ್ಷಕರ ಕಚೇರಿ, ನರಗುಂದ ತಾಲೂಕು, ಮಿನಿ ವಿಧಾನಸೌಧ, ಹುಬ್ಬಳ್ಳಿ ರಸ್ತೆ, ನರಗುಂದ (582207) ಕಚೇರಿಯನ್ನು ಸಂಪರ್ಕಿಸಬಹುದಾಗಿದೆ.

## ನಿಧನ

**ಉಮಲೆಪ್ಪ ರಾಠೋಡ**



ಗಜೇಂದ್ರಗಡ: ಬಸವೇಶ್ವರ ನಗರ ಸೇವಾಲಾಲ್ ಕಲ್ಯಾಣ ಮಂಟಪದ ಸಮೀಪದ ನಿವಾಸಿ ಹಾಗೂ ಲಂಬಾಣಿ ಸಮುದಾಯದ ಹಿರಿಯರಾದ ಉಮಲೆಪ್ಪ (ಉಮಲಾಜಿ) ಶಿವಪ್ಪ ರಾಠೋಡ (83) ಅವರು ಮಂಗಳವಾರ ನಿಧನರಾದರು.

ಮೃತರು ಪತ್ನಿ, ಆರು ಜನ ಪುತ್ರರು, ನಾಲ್ವರು ಪುತ್ರಿಯರು ಸೇರಿದಂತೆ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆಯು ಬುಧವಾರ ಗಜೇಂದ್ರಗಡ-ನರೇಗಲ್ ಮಾರ್ಗದ ರುದ್ರಭೂಮಿಯಲ್ಲಿ ನಡೆಯಿತು ಎಂದು ಕುಟುಂಬಸ್ಥರು ತಿಳಿಸಿದ್ದಾರೆ.

## 'ಜಮೀನು ಉಳಿಸಿ' ಅಭಿಯಾನಕ್ಕೆ ರೈತರಲ್ಲಿ ಉತ್ತಮ ಸ್ಪಂದನೆ




■ವಿಜಯಸಾಕ್ಷಿ ಸುದ್ದಿ, ನರಗುಂದ

ಐಸಿಎಆರ್-ಕೆ.ಎಚ್. ಪಾಟೀಲ ಕೃಷಿ ವಿಜ್ಞಾನ ಕೇಂದ್ರ, ಹುಲಕೋಟಿ ಹಾಗೂ ಕೃಷಿ ಇಲಾಖೆ, ಗದಗ ಇವರ ಸಂಯುಕ್ತಾಶ್ರಯದಲ್ಲಿ ನರಗುಂದ ತಾಲೂಕಿನ ಖಾನಾಪೂರ ಹಾಗೂ ಹದಲಿ ಗ್ರಾಮಗಳಲ್ಲಿ 'ಜಮೀನು ಉಳಿಸಿ' (ಖೇತ ಬಚಾವೋ) ಅಭಿಯಾನದಡಿ ರೈತರ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮದಲ್ಲಿ ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿ ಡಾ. ಮಂಜುಪ್ರಕಾಶ ಪಾಟೀಲ ಮಾತನಾಡಿ, ಮಣ್ಣಿನ ಪರೀಕ್ಷೆಯ ಆಧಾರದ ಮೇಲೆ ಗೊಬ್ಬರ ಬಳಕೆ ಮಾಡುವುದರಿಂದ ಮಣ್ಣಿನ ಫಲವತ್ತತೆಯನ್ನು ಕಾಪಾಡಿಕೊಳ್ಳಬಹುದು ಎಂದು ತಿಳಿಸಿದರು. ರಾಸಾಯನಿಕ ಗೊಬ್ಬರಗಳ ಅತಿಯಾದ ಬಳಕೆಯಿಂದ ಮಣ್ಣಿನ ಗುಣಮಟ್ಟ ಕುಸಿಯುತ್ತಿದ್ದು, ಉತ್ಪಾದನೆಯ ಮೇಲೂ ಪ್ರತಿಕೂಲ ಪರಿಣಾಮ ಬೀರುತ್ತಿದೆ ಎಂದು ಹೇಳಿದರು.

ಸಾವಯವ ಮತ್ತು ನೈಸರ್ಗಿಕ ಕೃಷಿ ಪದ್ಧತಿಗಳಾದ ಹಸಿರೆಲೆ ಗೊಬ್ಬರ, ಕೊಟ್ಟಿಗೆ ಗೊಬ್ಬರ, ಎರೆಹುಳು ಗೊಬ್ಬರ, ಜೀವಾಮೃತ, ಘನಜೀವಾಮೃತ, ನೀಮಾಸ್ತ್ರ ಹಾಗೂ ಬ್ರಹ್ಮಾಸ್ತ್ರಗಳ ಬಳಕೆಯಿಂದ ಮಣ್ಣಿನ ಆರೋಗ್ಯವನ್ನು ಸುಧಾರಿಸಬಹುದು ಎಂದು ಅವರು ವಿವರಿಸಿದರು.

ಬೇಸಾಯ ಶಾಸ್ತ್ರ ವಿಭಾಗದ ವಿಜ್ಞಾನಿ ಡಾ. ಚೇತನಬಾಬು ಆರ್.ಟಿ. ಮಾತನಾಡಿ, ಮಣ್ಣು ಜೀವಂತ ಸಂಪನ್ಮೂಲವಾಗಿದ್ದು, ಅದರಲ್ಲಿರುವ ಉಪಯುಕ್ತ ಸೂಕ್ಷ್ಮಾಣು ಜೀವಿಗಳನ್ನು ಸಂರಕ್ಷಿಸುವುದು ಅತ್ಯಗತ್ಯ ಎಂದರು. ಸಾವಯವ ಮತ್ತು ನೈಸರ್ಗಿಕ ಕೃಷಿಯ ಮಹತ್ವವನ್ನು ವಿವರಿಸಿದ ಅವರು, ವಿವಿಧ ಸಾವಯವ ಕೃಷಿ ಪರಿಕರಗಳ ತಯಾರಿಕೆ ಹಾಗೂ ಬಳಕೆಯ ಕುರಿತು ರೈತರಿಗೆ ಮಾಹಿತಿ ನೀಡಿದರು.

ಸಾವಯವ ಕೃಷಿಕ ನಾಗನಗೌಡ ಕಗದಾಳ ತಮ್ಮ ಅನುಭವಗಳನ್ನು ಹಂಚಿಕೊಂಡು, ಸಾವಯವ ಕೃಷಿಯಿಂದ ಉತ್ತಮ ಇಳುವರಿ ಮತ್ತು ಆರೋಗ್ಯಕರ ಉತ್ಪನ್ನಗಳನ್ನು ಪಡೆಯಲು ಸಾಧ್ಯ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಆತ್ಮ ಯೋಜನೆಯ ಬಿ.ಟಿ.ಎಂ. ಪ್ರವೀಣ ಪಾಟೀಲ, ಪ್ರಗತಿಪರ ರೈತರು, ರೈತ ಮಹಿಳೆಯರು ಹಾಗೂ ಕೃಷಿ ಸಖಿಯರು ಭಾಗವಹಿಸಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka